ವಿಜಯಪುರ | ಸಂಪುಟ 04 | ಸಂಚಿಕೆ 164 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ


ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶುಕ್ರವಾರ, ಅಗಸ್ಟ್, 21, 2026



"ಇದು ಒಕ್ಕೂಟ ವ್ಯವಸ್ಥೆ. ಯಾವುದೇ ರಾಜ್ಯ ಮತ್ತೊಂದು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡಬಾರದು. ಪನ್ನೀರಸೆಲ್ವಂ ಆಗಿರಲಿ ಅಥವಾ ಯಾರೇ ಆಗಿರಲಿ, ಅವರು ರಾಜಕೀಯ ನೀತಿಯನ್ನು ಪಾಲಿಸಬೇಕು. ತಮಿಳುನಾಡಿನ ಕಾನೂನು ಮತ್ತು ಸುವ್ಯವಸ್ಥೆ ವಿಚಾರದಲ್ಲಿ ನಾನು ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ."

■ ಡಿ ಕೆ ಶಿವಕುಮಾರ್
ಮುಖ್ಯಮಂತ್ರಿ

■ ಉದಯರಶ್ಮಿ ದಿನಪತ್ರಿಕೆ




ಭಾರತದ ಆತ್ಮ ಅದು 'ಆಧ್ಯಾತ್ಮ'. ಮಾನವನ ಅಂತಿಮ ಗುರಿ ಸಾಧನೆಯೇ ಪರಮ ಸಂತೋಷ, ನೆಮ್ಮದಿ ಸೌಖ್ಯ ಕಾಣುವುದು.

ಬದುಕಿನುದ್ದಕ್ಕೂ ಏನೆಲ್ಲವನ್ನು ಸಂಪಾದಿಸಿದರೂ ಕೂಡ ತನ್ನನ್ನು ತಾನು ಮರೆತು ಅಲ್ಪಸುಖದ ಜೀವಿಯಾಗಿರುತ್ತಾನೆ. ಆಧ್ಯಾತ್ಮ ಅದು ಎಲ್ಲವನ್ನು ತೊರೆ ಎಂದಲ್ಲ, ಎಲ್ಲರೊಳಗೂ ಎಲ್ಲದರೊಳಗೂ ಇದ್ದು ಇಲ್ಲದಂತೆ "ಉಂಡು ಉಪವಾಸಿ ಬಳಸಿ ಬ್ರಹ್ಮಚಾರಿ" ಯಂತೆ ತನ್ನನ್ನು ತಾನು ಅರಿಯುವುದರ ಮೂಲಕ ಸ್ವಯವನರಿತು ಆದಮ್ಯ ಚೇತನನಾಗಿ ಬಾಳುವಂತಹುದು.

ಪವಿತ್ರವಾದ ಶ್ರಾವಣ ಮಾಸದಲ್ಲಿ ಶ್ರವಣ ಮೇನನ ನಿಧಿದ್ಯಾಸದಿಂದ ಸತ್ಸಂಗತ್ತೆ ನಿಸಂಗತ್ವಂ ನಿಸಂಗತ್ವೇ ನಿರ್ಮೂಹಿತ್ವಂ ನಿರ್ಮೂಹಿತ್ವೇ ನಿರ್ಜಲತತ್ವಂ ನಿಶ್ಚಲ ನಿರಾಕಾರ ನಿರಂಜನ ನಿರಾಭಾರಿ ನಿರ್ಭಯನಾದ ಭಗವಂತನ ಸಾನಿಧ್ಯಕ್ಕೆ ಸತ್ಸಂಗ ಬಹಳ ಮುಖ್ಯ. ಸಾರ ಸಜ್ಜನರ ಸಂಘ ಹೆಜ್ಜೇನು ಸವಿದಂತೆ ಎಂಬ ಶರಣ ವಾಣಿಯಂತೆ ಸತ್+ ಜನರ = ಸಜ್ಜನರ ಕೂಟ ಮನಸ್ಸಿನ ನೆಮ್ಮದಿಗೆ ರಹದಾರಿಯಾಗಿದೆ. ಅದಕ್ಕಂತೆಯೇ ಶ್ರವಣ ಶ್ರಾವಣ ಕೇಳುವಿಕೆ ನೆರೆಕೆಳು ಕೇಳುದದನರಿ ಅರಿತೊಮ್ಮೆ ಆಚರಿಸು ಎಂದು ಪೂರ್ವಜರು ಶ್ರಾವಣದಲ್ಲಿ ಸಜ್ಜನರ ಸಂಘದಲ್ಲಿದ್ದು ಪುರಾಣ ಪ್ರವಚನಗಳನ್ನು ಕೇಳುತ್ತಾ, ಕೇಳುತ್ತಾ ಬದುಕಿನ ಸಾರ್ಥಕತೆಯನ್ನು ಕಂಡುಂಡಿದ್ದು ಸತ್ಯ. " ಲೇಸ ಕೇಳಲಿ ಕಿವಿಯು ನಾಲಿಗೆ ಲೇಸ ನುಡಿದು ಬರಲಿ ಲೆಸೆ ಕೈಗಳಿಂದಾಗಲಿ ಲೇಸನುಸಿರಿ ಲೇಸನ್ನುಟ್ಟು ಲೆಸಿನಿಂದಲೇ ಬಾಳು ಬೆಳಗುತಿರಲಿ" ಇದೇ ಶ್ರಾವಣ ಮಾಸದ ಸಾರ್ಥಕ್ಯದ ಕ್ಷಣಗಳು.

## ತಮ್ಮದೇ ಸರ್ಕಾರದ ವಿರುದ್ಧ ತಿರುಗಿಬಿದ್ದ ರವಿಕುಮಾರ್ ಗಣಿಗ । ರೈತರಿಂದ ಪ್ರತಿಭಟನೆ, ಹೆದ್ದಾರಿ ತಡೆದು ಆಕ್ರೋಶ

# ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ :ರೈತರ ಆಕ್ರೋಶ

ಬೆಂಗಳೂರು/ಮಂಡ್ಯ: ಕೆಆರ್‌ಎಸ್ ಅಣೆಕಟ್ಟಿನಿಂದ ಭಾರಿ ಪ್ರಮಾಣದ ನೀರು ಬಿಡುಗಡೆ ಮಾಡಲಾಗುತ್ತಿದೆ ಎಂದು ಆರೋಪಿಸಿ, ಕಾವೇರಿ ಜಲಾನಯನ ಪ್ರದೇಶದಲ್ಲಿ, ವಿಶೇಷವಾಗಿ ಮಂಡ್ಯದಲ್ಲಿ ರೈತರು ಗುರುವಾರ ಪ್ರತಿಭಟನೆಯನ್ನು ತೀವ್ರಗೊಳಿಸಿದರು.

ಆಗಸ್ಟ್ 12 ರಿಂದ 15 ದಿನಗಳವರೆಗೆ ನಿತ್ಯ 12,000 ಕ್ಯೂಸೆಕ್ ನೀರು ಬಿಡುಗಡೆ ಮಾಡಬೇಕೆಂಬ ಕಾವೇರಿ ನೀರು ನಿಯಂತ್ರಣ ಸಮಿತಿ(ಸಿಡಬ್ಲ್ಯೂಆರ್‌ಸಿ) ಶಿಫಾರಸನ್ನು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯೂಎಂಎ) ಎತ್ತಿಹಿಡಿದಿದೆ.

ಸಿಡಬ್ಲ್ಯೂಎಂಎ ಆದೇಶದ ಬೆನ್ನಲ್ಲೇ ರಾಜ್ಯ ಸರ್ಕಾರ ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿದೆ ಎಂದು ಆರೋಪಿಸಿ ಮಂಡ್ಯದ ಸಂಜಯ್ ವೃತ್ತದಲ್ಲಿ ರೈತರು ಗುರುವಾರ ಧರಣಿ ನಡೆಸಿದರು.

ಕನ್ನಡ ಸೇನೆ ಕಾರ್ಯಕರ್ತರು, ರೈತ ಸಂಘಟನೆಯ ಪ್ರತಿಭಟನೆಗೆ ಬೆಂಬಲ ನೀಡಿ ಹಳೆಯ ಬೆಂಗಳೂರು–ಮೈಸೂರು ಹೆದ್ದಾರಿಯನ್ನು ತಡೆದರು.

ಆಣೆಕಟ್ಟಿನಲ್ಲಿ ಕೇವಲ 109 ಅಡಿ ನೀರು ಮಾತ್ರ



ಇದ್ದು, ರಾಜ್ಯ ಸರ್ಕಾರ ಯಾವುದೇ ಕಾರಣಕ್ಕೂ ತಮಿಳುನಾಡಿಗೆ ನೀರು ಬಿಡುಗಡೆ ಮಾಡಬಾರದು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕನ್ನಡ ಕಾರ್ಯಕರ್ತ ವಾಟಾಳ್ ನಾಗರಾಜ್, ದೇಶಾದ್ಯಂತ ಬಲವಾದ ಸಂದೇಶವನ್ನು ರವಾನಿಸಲು ಕರ್ನಾಟಕದ ಜನ ಒಗ್ಗೂಡಿ ಈ ಪ್ರತಿಭಟನೆಯನ್ನು ಬೆಂಬಲಿಸಬೇಕೆಂದು ಮನವಿ ಮಾಡಿದರು.

### ತಮ್ಮದೇ ಸರ್ಕಾರದ ವಿರುದ್ಧ ತಿರುಗಿಬಿದ್ದ ಶಾಸಕ ಗಣಿಗ



ಮಂಡ್ಯ ಶಾಸಕ ರವಿಕುಮಾರ್ ಗೌಡ (ಗಣಿಗ) ಅವರು ಸಹ ತಮ್ಮದೇ ಸರ್ಕಾರದ ವಿರುದ್ಧ ತಿರುಗಿ ಬಿದ್ದಿದ್ದು, ತಮಿಳುನಾಡಿಗೆ ನೀರು ಬಿಡುಗಡೆ ಮಾಡುವುದನ್ನು ನಿಲ್ಲಿಸಬೇಕೆಂದು ಒತ್ತಾಯಿಸಿದ್ದಾರೆ. ಕಾವೇರಿ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ರವಿಕುಮಾರ್ ಗಣಿಗ, ತಮಿಳುನಾಡಿಗೆ ನಿರಂತರವಾಗಿ ನೀರು ಹರಿಸುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿದ್ದಾರೆ. ನಮ್ಮ ರಾಜ್ಯದ ರೈತರಿಗೆ ಬೆಳೆಗಳಿಗೆ ನೀರು ಸಿಗದ ಪರಿಸ್ಥಿತಿ ನಿರ್ಮಾಣವಾದರೆ ಸಮಸ್ಯೆ ಮತ್ತಷ್ಟು ಗಂಭೀರವಾಗಲಿದೆ ಎಂದು ಹೇಳಿದ್ದಾರೆ."ಒಂದೆಡೆ, ನೀವು ತಮಿಳುನಾಡಿಗೆ ನೀರು ಬಿಡುತ್ತಿದ್ದೀರಿ, ಮತ್ತೊಂದೆಡೆ ನೀವು ನಮಗೆ ನೀರು ಕೊಡುವುದಿಲ್ಲ ಎಂದು ಹೇಳುತ್ತಿದ್ದೀರಿ. ನಮ್ಮ ರೈತರಿಗೆ ಅವರ ಬೆಳೆಗಳಿಗೆ ನೀರು ಕೊಡದಿದ್ದರೆ, ಗಂಭೀರ ಪರಿಸ್ಥಿತಿಯನ್ನು ಎದುರಿಸಬೇಕಾಗುತ್ತದೆ" ಎಂದು ರಾಜ್ಯ ಸರ್ಕಾರಕ್ಕೆ ಎಚ್ಚರಿಸಿದರು.

# ದೇವರಾಜ ಅರಸು ಕರ್ನಾಟಕ ನಾಮಕರಣದ ರೂವಾರಿ :ಅರಳಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಕರ್ನಾಟಕ ರಾಜ್ಯಕ್ಕೆ ಮೈಸೂರ ಪ್ರಾಂತವೆಂಬ ಹೆಸರನ್ನು ತೆಗೆದು ಕರ್ನಾಟಕ ರಾಜ್ಯವೆಂದು ನಾಮಕರಣ ಮಾಡಿದ ರೂವಾರಿ ಹಿಂದುಳಿದ ವರ್ಗಗಳ ನಾಯಕ, ಸಾಮಾಜಿಕ ಪರಿವರ್ತನೆಯ ಹರಿಕಾರ ರಾಜ್ಯದ ಮಾಜಿ ಮುಖ್ಯಮಂತ್ರಿ ದೇವರಾಜ ಅರಸರವರು ಎಂದು ಪ್ರಾಧ್ಯಾಪಕ ರವಿಕುಮಾರ ಅರಳಿ ಹೇಳಿದರು.

ತಾಲೂಕಾ ಆಡಳಿತ ತಾಪಂ ಮತ್ತು ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಕ್ಷೇತ್ರಶಿಕ್ಷಣಾಧಿಕಾರಿ ಕಾರ್ಯಾಲಯದ ಗುರುಭವನದಲ್ಲಿ ನಡೆದ ದೇವರಾಜ ಅರಸರವರ 111 ನೇ ಜನ್ಮ ದಿನಾಚರಣೆಯಲ್ಲಿ ಮಾತನಾಡಿದರು.

ರಾಜ್ಯದಲ್ಲಿ ಹಾವನೂರ ಆಯೋಗ ಜಾರಿಗೆ ತಂದು ಉದ್ಯೋಗ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಹಿಂದುಳಿದ ವರ್ಗದವರಿಗೆ ಸವಲತ್ತು ನೀಡಿದವರು ಮತ್ತು ರಾಜ್ಯದಲ್ಲಿ ಬಡ ಪರಿಶಿಷ್ಟ ಜಾತಿ ಪಂಗಡ ಹಿಂದುಳಿದ ವರ್ಗ ಮತ್ತು ಅಲ್ಪ ಸಂಖ್ಯಾತ ವಸತಿ ನಿಲಯ ತೆಗೆದು ವಿದ್ಯಾರ್ಥಿಗಳ ವಿದ್ಯಾಬ್ಯಾಸಕ್ಕೆ ಅನುಕೂಲ ಮಾಡಿದ ಧೀಮಂತ ನಾಯಕರು ಎಂದರು.

ಕಂದಾಯ ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಭೂ ಸುಧಾರಣೆ ಕಾಯ್ದೆ ಜಾರಿಗೆ ತಂದರು. ಉಳುವವನೇ ಭೂಮಿಯ ಒಡೆಯಕಾಯ್ದೆ ತಂದರು. ಎಲ್ಲ ವರ್ಗದವರು ಕೃಷಿ ಚಟುವಟಿಕೆಯಲ್ಲಿ ತೊಡಗುವಂತೆ ಮಾಡಿದರು. ಭಾಗ್ಯಜ್ಯೋತಿ ಯೋಜನೆ ತಂದು ಬಡವರಿಗೆ ಉಚಿತ ವಿದ್ಯುತ ನೀಡಿದರು. ಸಮಾನತೆಯ ಹರಿಕಾರರು ಬಡವರ ಸರ್ವತೋಮುಖ ಅಭಿವೃದ್ದಿಗೆ ಶ್ರಮಿಸಿದವರು ಎಂದರು.

ತಹಸೀಲ್ದಾರ ನಾಂಗೇದ್ರ ಕೋಳಶೆಟ್ಟಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎಸ್.ಆರ್.ಗದ್ಯಾಳ,ಎಸ.ಎಸ್. ಜಟಗೊಂಡ, ಪಿ.ಬಿ.ತಳವಾರ ಮಾತನಾಡಿದರು.

ವೇದಿಕೆಯ ಮೇಲೆ ಡಿ.ವಾಯ್ ಎಸ್ ಪಿ ಸದಾಶಿವ ಕಟ್ಟಿಮನಿ ತಾಪಂ ಇಒ ಮಹಾದೇವಪ್ಪ ಏವೂರ, ಬಿ.ಎಸ್.ಕವಲಗಿ, ಉಮೇಶ ಲಮಾಣಿ, ಮಂಜುನಾಥ ಧುಳೆ, ಎಸ್.ಜಿ.ಸಂಗಾಲಕ,ಅಲೆಮಾರಿ ಜನಾಂಗ ಒಕ್ಕೂಟದ ಅಧ್ಯಕ್ಷ ವೇಂಕಟೇಶ ಭೈರಾಮಡಗಿ, ಉಪಾಧ್ಯಕ್ಷ ದೀಪಕ ಮಾನೆ, ಆರ್.ವಿ.ಪಾಟೀಲ ಮತ್ತಿತರಿದ್ದರು.

# ವಿಜಯಪುರ ಜಿಲ್ಲೆಗೆ 371(ಜೆ) ಸೌಲಭ್ಯಕ್ಕೆ ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ವಿಜಯಪುರ ಜಿಲ್ಲೆಯನ್ನು ಕಲ್ಯಾಣ ಕರ್ನಾಟಕ ವ್ಯಾಪ್ತಿಗೆ ಸೇರಿಸಿ ಸಂವಿಧಾನದ 371(ಜೆ) ಸೌಲಭ್ಯಗಳನ್ನು ಒದಗಿಸಲು ಆಗ್ರಹಿಸಿ ತಾಲ್ಲೂಕು ರೈತಸಂಘ ಹಾಗೂ ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ಶಿರಸ್ತೇದಾರ ಡಿ.ಎಸ್.ಭೋವಿ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯಕ್ಕೆ ಬುಧವಾರ ಆಗಮಿಸಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ನಮ್ಮ ಕರ್ನಾಟಕ ಸೇನೆಯ ಪದಾಧಿಕಾರಿಗಳು ಸಂವಿಧಾನದ 371(ಜೆ) ಸೌಲಭ್ಯಕ್ಕೆ ಆಗ್ರಹಿಸಿದರು. ಈ ಸಂದರ್ಭದಲ್ಲಿ ರೈತಸಂಘದ ಜಿಲ್ಲಾಧ್ಯಕ್ಷ ಸಿದ್ಧನಗೌಡ ಜಲಪೂರ ಮಾತನಾಡಿ, ವಿಜಯಪುರ ಜಿಲ್ಲೆ ಈಗಾಗಲೇ ಕಲ್ಯಾಣ ಕರ್ನಾಟಕದ ಹೈಕೋರ್ಟ್ಗಾಗೂ ಕಲ್ಯಾಣ ಕರ್ನಾಟಕ ಸಾರಿಗೆ ವ್ಯಾಪ್ತಿಗೆ ಸೇರಿದೆ. ಜೊತೆಗೆ ಜಿಲ್ಲೆ ಶಿಕ್ಷಣ, ಆರೋಗ್ಯ,ಕೈಗಾರಿಕೆ,ಉದ್ಯೋಗದ ವಿಷಯದಲ್ಲಿ ರಾಜ್ಯದಲ್ಲಿಯೇ ಕೆಳಗಿನ ಸ್ಥಾನದಲ್ಲಿದೆ. ಅಲ್ಲದೆ ಡಿ.ಎಂ.ನಂಜುಂಡಪ್ಪ ವರದಿಯ ಪ್ರಕಾರ ಜಿಲ್ಲೆಯ ಎಲ್ಲ ತಾಲ್ಲೂಕುಗಳು ಅತ್ಯಂತ ಹಿಂದುಳಿದಿವೆ. ಆದ್ದರಿಂದ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸಂವಿಧಾನದ 371(ಜೆ) ಸೌಲಭ್ಯಗಳು ಅಗತ್ಯವಾಗಿವೆ. ಆದ್ದರಿಂದ ಸರ್ಕಾರ ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ವಿಜಯಪುರ ಜಿಲ್ಲಾ 371(ಜೆ) ಹೋರಾಟ ಸಮಿತಿಯ ಲಾಯಪ್ಪ ಇಂಗಳೆ ಮಾತನಾಡಿ, ನಮ್ಮ ಜಿಲ್ಲೆ 1948 ರವರೆಗೆ ಹೈದ್ರಾಬಾದ್ ನಿಜಾಮರ ಆಳ್ವಿಕೆಗೆ ಒಳಪಟ್ಟಿತ್ತು. ಕಲಬುರ್ಗಿ, ರಾಯಚೂರ, ಬೀದರ, ಜಿಲ್ಲೆಗಳೊಂದಿಗೆ ಒಡನಾಟ ಹೊಂದಿ ಸಂಸ್ಕೃತಿ, ಆಡಳಿತ, ಶೈಕ್ಷಣಿಕ ಹಿನ್ನೆಲೆ ಹೊಂದಿರುವ ನಮ್ಮ ಜಿಲ್ಲೆಯನ್ನು 371(ಜೆ) ಸೌಲಭ್ಯಗಳಿಂದ ವಂಚಿತವನ್ನಾಗಿ ಮಾಡಿದ್ದು ತಪ್ಪು ಎಂದರು. ರೈತಸಂಘದ ಸಂಪತ್ ಜಮಾದಾರ, ವಿನೋದ ಖೇಡ, ಮಡಿವಾಳಪ್ಪ ಕುಂಬಾರ ನಮ್ಮ ಕರ್ನಾಟಕ ಸೇನೆಯ ತಾಲ್ಲೂಕು ಘಟಕದ ಅಧ್ಯಕ್ಷ ಹಸನ್ ನಧಾಫ್, ಕರ್ನಾಟಕ ರಕ್ಷಣಾ ವೇದಿಕೆಯ ತಾಲ್ಲೂಕು ಘಟಕದ ಅಧ್ಯಕ್ಷ ರೆಹಮಾನ ಕಣಕಾಲ, ಎಸ್.ವೈ.ಬಜಂತ್ರಿ, ರಮೇಶ ಯರನಾಳ, ಪರಶುರಾಮ ಯಲಗೋಡ, ಬಿ.ಬಿ.ಪಾಟೀಲ, ದಾದಾ ಬೇಪಾರಿ, ಕುಮಾರ ಚವ್ಹಾಣ, ದಾವುಲಸಾಬ್ ಹೆಬ್ಬಾಳ, ತಿಪ್ಪಣ್ಣ ಮೇಲಿನಮನಿ ಇದ್ದರು.

## ಸಚಿವ ಬಿ.ನಾಗೇಂದ್ರ ರಾಜೀನಾಮೆ ಹಾಗೂ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜಿಲ್ಲಾ ಬಿಜೆಪಿ ನಡೆಸುತ್ತಿರುವ ಧರಣಿ

# 3 ದಿನ ಪೂರೈಸಿದಬಿಜೆಪಿಯ ಬೃಹತ್ ಧರಣಿ ಸತ್ಯಾಗ್ರಹ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಸಚಿವ ಬಿ.ನಾಗೇಂದ್ರ ರಾಜೀನಾಮೆ ಹಾಗೂ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಜಿಲ್ಲಾ ಬಿಜೆಪಿ ನಗರದಲ್ಲಿ ನಡೆಯುತ್ತಿರುವ ಬೃಹತ್ ಧರಣಿ ಸತ್ಯಾಗ್ರಹ 3ನೇ ದಿನಕ್ಕೆ ಕಾಲಿಟ್ಟಿದೆ.

ಧರಣಿ ಸತ್ಯಾಗ್ರಹದ ನೇತೃತ್ವವನ್ನು ಬಿಜೆಪಿ ನಗರ ಘಟಕ ನೇತೃತ್ವದಲ್ಲಿ ಧರಣಿ ನಡೆಸಿದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ, ಸಿದ್ಧರಾಮಯ್ಯನವರ ಅವಧಿಯಲ್ಲಿ ಭ್ರಷ್ಟಾಚಾರ ಆಗಿದ್ದು ನಿಜ ಎಂದು ಒಪ್ಪಿಕೊಂಡಿದ್ದಾರೆ. ಮತ್ತೆ ಹೊರಳಿ ಅವರನ್ನೇ ಮಂತ್ರಿ ಮಾಡಿ ಕೊಂಡಿರುವುದು ನಾಚಿಕೆಗೇಡಿನ ಸಂಗತಿ ಎಂದರು. ಜಿಲ್ಲೆಯ ಬರಗಾಲ ಪರಿಸ್ಥಿತಿಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಗಂಭೀರವಾಗಿ ತೆಗೆದುಕೊಂಡಿರುವುದಿಲ್ಲ. ಬರಗಾಲ ವೀಕ್ಷಣೆಯನ್ನು ಬರಿ ಕಾಟಾಚಾರಕ್ಕೆ ವೀಕ್ಷಣೆ ಮಾಡಿದ್ದಾರೆ. ಇಂಡಿಯಲ್ಲಿ ಉಸ್ತುವಾರಿ ಸಚಿವ ಅವರ ಜೊತೆ ಅಲ್ಲಿಯ ಶಾಸಕ ಭಾಗವಹಿಸಿಲ್ಲ. ಅಲ್ಲಿಯ ಶಾಸಕರೇ ಸಾತ ನೀಡುತ್ತಿಲ್ಲ. ಇದು ಅಭಿವೃದ್ಧಿಗೆ ಕುಂಟಿತವಾಗುತ್ತದೆ ಎಂದರು.

ರೈತರ ಸಮಸ್ಯೆಯನ್ನು ವಿಧಾನ ಸಭೆಯಲ್ಲಿ ಸಮರ್ಥವಾಗಿ ಪ್ರಸ್ತಾಪಿಸಿ ಜಿಲ್ಲೆಗೆ ವಿಶೇಷ ಬರ ಪರಿಹಾರ ಪ್ಯಾಕೇಜ್ ತರಲು ಮುಂದಾಗಬೇಕು. ಕೇವಲ ಭರವಸೆಗಳಿಗೆ ಸೀಮಿತವಾಗದೇ ರೈತರ ಸಂಕಷ್ಟ ನಿವಾರಣೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಜನಪ್ರತಿನಿಧಿಗಳು ಕಾರ್ಯನಿರ್ವಹಿಸಬೇಕೆಂದು ಆಗ್ರಹಿಸಿದರು. ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ ಮಾತನಾಡಿ, ಪಾರ್ಲಿಮೆಂಟದಲ್ಲಿ ಸದನ ನಡೆಯುತ್ತಿರುವಾಗ ಕೇಂದ್ರ ಸರ್ಕಾರಕ್ಕೆ ಕೆಟ್ಟ ಹೆಸರು ತರಲು ಕಾಕ್ರೋಜ್ ಜನತಾ ಪಾರ್ಟಿ ಕೆಲವು ಗೂಂಡಾಗಳ ಜತೆಗೂಡಿ ಕಾಂಗ್ರೆಸ್ ಪಕ್ಷದ ನಾಯಕ ರಾಹುಲ್ ಗಾಂಧಿ ವಿದ್ಯಾರ್ಥಿಗಳ ಹೆಸರು ಹೇಳಿ ತಮ್ಮ ಬೇಳೆ ಬೆಯಿಸುವ ಸಲುವಾಗಿ ಕೇಂದ್ರದ ವಿರುದ್ಧ ಇಲ್ಲ ಸಲ್ಲದ ಆರೋಪ ಮಾಡಿರುವದು ನಾಚಿಗೇಡಿನ ಸಂಗತಿ ಎಂದು ಕಿಡಿ ಕಾರಿದರು. ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಸದಸ್ಯರಾದ ಶಿವರುದ್ರ ಬಾಗಲಕೋಟ, ರವೀಂದ್ರ ಲೋಣಿ, ಉಮೇಶ ವಂದಾಲ ಮಾತನಾಡಿದರು.

ಈ ಸಂದರ್ಭ ಸಂಸದರಾದ ರಮೇಶ ಜಿಗಜಿಣಗಿ, ಬಿಜೆಪಿ ನಗರ ಮಂಡಲ ಅಧ್ಯಕ್ಷ ಸಂದೀಪ ಪಾಟೀಲ, ಮಹಾಪೌರರಾದ ಎಂ ಎಸ್ ಕರಡಿ, ಉಪ ಮಹಾಪೌರರಾದ ಸುಮಿತ್ರಾ ಜಾಧವ, ವಿವೇಕಾನಂದ ಡಬ್ಬಿ, ಮಳುಗೌಡ ಪಾಟೀಲ, ಸಾಬು ಮಾಶ್ಯಾಳ, ಕೃಷ್ಣ ಗುನ್ಹಾಳಕರ, ರಾಜೇಶ ತಾವಸೆ, ರಮೇಶ ಬಿದನೂರ, ಭೀಮಾಶಂಕರ ಹದನೂರ, ವಿಜಯ ಜೋಶಿ, ಸ್ವಪ್ನಾ ಕಣಮುಚನಾಳ, ಶ್ರೀಕಾಂತ ಶಿಂಧೆ, ಭರತ ಕುಲಕರ್ಣಿ, ಭರತ ಕೋಳಿ, ಶಿಲ್ಪಾ ಕುದರಗುಂಡ, ಮಂಜುನಾಥ ಮೀಸೆ, ರಾಹುಲ ಜಾಧವ, ಸುರೇಶ ಬಿರಾದಾರ, ಮಹೇಂದ್ರ ನಾಯಕ, ಜವಾಹರ ಗೋಸಾವಿ, ರಾಜು ಬಿರಾದಾರ, ಸಂಪತ್ ಕೋವಳ್ಳಿ, ಪರಶುರಾಮ ರಜಪೂತ,ಹಣಮಂತ ಬಿರಾದಾರ, ಪಾಪುಸಿಂಗ ರಜಪೂತ, ಚಿನ್ನು ಚಿನಗುಂಡಿ, ಭಾರತಿ ಭೂಯ್ಯಾರ, ಅಪ್ಪು ಕುಂಬಾರ, ಬಸವರಾಜ ಮಣೂರ, ರವಿಕಾಂತ ಬಗಲಿ, ಪ್ರಕಾಶ ಮಿರ್ಜಿ, ಶಿವಾನಂದ ಭೂಯ್ಯಾರ ಸೇರಿದಂತೆ ಮುಂತಾದವರು ಧರಣಿಯಲ್ಲಿ ಪಾಲ್ಗೊಂಡಿದ್ದರು.

## ಹಿಂದುಳಿದ ವರ್ಗಗಳ ಧೀಮಂತ ನಾಯಕ ಡಿ.ದೇವರಾಜ ಅರಸು ಜನ್ಮ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅಭಿಮತ

# ಸಾಮಾಜಿಕ ಬದಲಾವಣೆಗೆ ಅರಸು ಕೊಡುಗೆ ಸದಾ ಸ್ಮರಣೀಯ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಶೋಷಿತ, ದಮನಿತ ಹಾಗೂ ದೀನ-ದಲಿತ ಸಮುದಾಯಗಳ ಸಮಗ್ರ ಏಳಿಗೆಗಾಗಿ ಡಿ. ದೇವರಾಜ ಅರಸು ಅವರು ರೂಪಿಸಿ ಜಾರಿಗೆ ತಂದ ಕ್ರಾಂತಿಕಾರಿ ಯೋಜನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಹೇಳಿದರು

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಗುರುವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಸಾಮಾಜಿಕ ಪರಿವರ್ತನೆಯ ಹರಿಕಾರ, ಹಿಂದುಳಿದ ವರ್ಗಗಳ ಧೀಮಂತ ನಾಯಕ ಹಾಗೂ ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

### ಅರಸು ಭಾವಚಿತ್ರ ಮೆರವಣಿಗೆ

ಸಮಾರಂಭಕ್ಕೂ ಮುನ್ನ ಬೆಳಿಗ್ಗೆ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಲ್ಲಿ ಡಿ. ದೇವರಾಜ ಅರಸು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಭವ್ಯ ಮೆರವಣಿಗೆಗೆ ಅದ್ದೂರಿ ಚಾಲನೆ ನೀಡಲಾಯಿತು.

ವಿವಿಧ ಜಾನಪದ ಕಲಾತಂಡಗಳ ಕಲಾ ವೈಭವದೊಂದಿಗೆ ನಗರದ ಪ್ರಮುಖ ರಸ್ತೆ ಹಾಗೂ ವೃತ್ತಗಳ ಮೂಲಕ ಸಾಗಿದ ಮೆರವಣಿಗೆಯು ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಯಶಸ್ವಿಯಾಗಿ ಸಮಾವೇಶಗೊಂಡಿತು.

ಡಿ. ದೇವರಾಜ ಅರಸು ಅವರು ಊಳುವವನೇ ಭೂ ಒಡೆಯ ಎಂಬ ಐತಿಹಾಸಿಕ ಭೂಸುಧಾರಣಾ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಅನೇಕ ಭೂರಹಿತ ಗೇಣಿದಾರರಿಗೆ ಜಮೀನಿನ ಹಕ್ಕು ದೊರಕಿಸಿಕೊಟ್ಟು, ಸಮಾಜದಲ್ಲಿ ನೆಲೆಸಿದ್ದ ಅಸಮಾನತೆಯನ್ನು ಕೊನೆಗಾಣಿಸಿ ಆರ್ಥಿಕ ಸಮಾನತೆ ತರಲು ಶ್ರಮಿಸಿದರು. ಆ ಕಾಲದಲ್ಲೇ ಅವರು ಆರಂಭಿಸಿದ ಸ್ಟೈಪಂಡರಿ ಹಾಗೂ ಶೈಕ್ಷಣಿಕ ನೆರವಿನ ಯೋಜನೆಗಳು, ವಿದ್ಯಾರ್ಥಿವೇತನ ಯೋಜನೆಗಳಿಗೆ ಬಲವಾದ ತಳಪಾಯವಾಗಿವೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಅರಸು ಅವರು ಸಮಾಜದ ಹಿಂದುಳಿದವರಿಗೆ ಸಾಮಾಜಿಕವಾಗಿ ನ್ಯಾಯ ದೊರಕಿಸಿಕೊಡುವಲ್ಲಿ ಅಭೂತಪೂರ್ವ ಸುಧಾರಣೆಗಳನ್ನು ತಂದರು. ಜೀತಪದ್ಧತಿಯಂತಹ ಅಮಾನವೀಯ ಆಚರಣೆಗಳನ್ನು ಕಾನೂನುಬದ್ಧವಾಗಿ ತೊಡೆದುಹಾಕಿ, ಹಿಂದುಳಿದ ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತೆವಸತಿ ನಿಲಯಗಳನ್ನು ಸ್ಥಾಪಿಸಿದರು. ಇಂದಿಗೂ ಸರ್ಕಾರದ ಈ ಸೌಲಭ್ಯಗಳನ್ನು ಸಮರ್ಥವಾಗಿ ಸದುಪಯೋಗಪಡಿಸಿಕೊಂಡು ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು ಎಂದರು. ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಹಣಮಂತ ಬಿ. ಪೂಜಾರಿ ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಜಿಲ್ಲೆಗೆ ಅತಿ ಹೆಚ್ಚು ಅಂಕ ಗಳಿಸಿ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನ ಸನ್ಮಾನಿಸಿ, ಪ್ರಶಸ್ತಿ ಪತ್ರ ನೀಡಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಮಹಾನಗರ ಪಾಲಿಕೆ ಉಪ ಆಯುಕ್ತ ಮಹಾವೀರ ಬೋರಣ್ಣವರ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಶಿವಾನಂದ ಮಾಸ್ತಿಹೊಳಿ, ಡಿಎಸ್‌ಪಿ ಎಂ.ಎ. ಉಪಾಸೆ, ಜಿಲ್ಲಾ ಖಜಾನಾಧಿಕಾರಿ ಆನಂದ ಮುಚ್ಚಂಡಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಹಣಮಂತ ಕಾಲತಿಪ್ಪಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ದೇವರಾಜ ಅರಸು ಅಭಿಮಾನಿಗಳ ಬಳಗದ ಸದಸ್ಯರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ವರಮಹಾಲಕ್ಷ್ಮಿ ವ್ರತ: ಐಶ್ವರ್ಯ, ಮಂಗಳ ಮತ್ತು ಶ್ರದ್ಧೆಯ ಪರ್ವ

■ **ಉದಯರಶ್ಮಿ ದಿನಪತ್ರಿಕೆ**

ಭಾರತೀಯ ಸಂಸ್ಕೃತಿಯಲ್ಲಿ ಹಬ್ಬಗಳು ಕೇವಲ ಆಚರಣೆಗಳಲ್ಲ, ಅವು ಬದುಕಿನ ಮೌಲ್ಯಗಳನ್ನು ನೆನಪಿಸುವ ಆಧ್ಯಾತ್ಮಿಕ ನಿಲ್ದಾಣಗಳು. ಅಂತಹ ಪವಿತ್ರ ಹಬ್ಬಗಳಲ್ಲಿ ವರಮಹಾಲಕ್ಷ್ಮಿ ವ್ರತಕ್ಕೆ ಅಗ್ರಸ್ಥಾನವಿದೆ. ಶ್ರಾವಣ ಮಾಸದ ಎರಡನೇ ಶುಕ್ರವಾರದಂದು ಆಚರಿಸಲ್ಪಡುವ ಈ ವ್ರತವು ಸ್ತ್ರೀಯರ ಶ್ರದ್ಧೆ, ಕುಟುಂಬದ ಸಮೃದ್ಧಿ ಮತ್ತು ದೈವೀ ಅನುಗ್ರಹದ ಸಂಗಮವಾಗಿದೆ.


ವರ ಎಂದರೆ ವರವನ್ನು ನೀಡುವವಳು, ಮಹಾಲಕ್ಷ್ಮಿ ಎಂದರೆ ಸಂಪತ್ತಿನ ಅಧಿದೇವತೆ. ಭಕ್ತರು ಕೇಳಿದ ವರಗಳನ್ನು ಕರುಣಿಸುವ ತಾಯಿ ಎಂಬ ಕಾರಣಕ್ಕೆ ಆಕೆಯನ್ನು ವರಮಹಾಲಕ್ಷ್ಮಿ ಎಂದು ಕರೆಯಲಾಗುತ್ತದೆ. ಈ ದಿನದಂದು ಮಹಾಲಕ್ಷ್ಮಿಯನ್ನು ಪೂಜಿಸಿದರೆ ಅಷ್ಟಲಕ್ಷ್ಮಿಯರ ಅನುಗ್ರಹವೂ ಒಟ್ಟಿಗೆ ದೊರೆಯುತ್ತದೆ ಎಂಬುದು ನಂಬಿಕೆ.

### ವ್ರತದ ಹಿನ್ನೆಲೆ ಮತ್ತು ಪೌರಾಣಿಕ ಕಥೆ



ವರಮಹಾಲಕ್ಷ್ಮಿ ವ್ರತದ ಕುರಿತು ಸ್ಕಂದ ಪುರಾಣದಲ್ಲಿ ವಿಸ್ತಾರವಾದ ಉಲ್ಲೇಖವಿದೆ. ಒಮ್ಮೆ ಪರಮೇಶ್ವರನು ಪಾರ್ವತಿದೇವಿಗೆ ಅತ್ಯಂತ ಶ್ರೇಷ್ಠವಾದ, ಸ್ತ್ರೀಯರಿಗೆ ಸೌಭಾಗ್ಯವನ್ನು ನೀಡುವ ವ್ರತದ ಬಗ್ಗೆ ತಿಳಿಸುತ್ತಾನೆ. ಅದೇ ವರಮಹಾಲಕ್ಷ್ಮಿ ವ್ರತ.

## ಹಬ್ಬಗಳು ಮತ್ತು ಪರಂಪರೆ



ಇನ್ನೊಂದು ಜನಪ್ರಿಯ ಕಥೆಯ ಪ್ರಕಾರ, ಕುಂಡಿನಪುರ ಎಂಬ ಪಟ್ಟಣದಲ್ಲಿ ಚಾರುಮತಿ ಎಂಬ ಗುಣವತಿ, ಪತಿವ್ರತಾ ಸ್ತ್ರೀ ಇದ್ದಳು. ಆಕೆಯ ಭಕ್ತಿಗೆ ಮೆಚ್ಚಿದ ಮಹಾಲಕ್ಷ್ಮಿಯು ಕನಸಿನಲ್ಲಿ ಬಂದು ಶ್ರಾವಣ ಶುಕ್ಲ ಪಕ್ಷದ ಶುಕ್ರವಾರದಂದು ತನ್ನನ್ನು ಪೂಜಿಸಲು ಹೇಳಿದಳು. ಚಾರುಮತಿಯು ತನ್ನ ನೆರೆಹೊರೆಯ ಸ್ತ್ರೀಯರೊಂದಿಗೆ ಅತ್ಯಂತ ಭಕ್ತಿಯಿಂದ ವ್ರತವನ್ನು ಆಚರಿಸಿದಳು. ಪೂಜೆಯ ಸಮಯದಲ್ಲಿಯೇ ಎಲ್ಲರಿಗೂ ಚಿನ್ನದ ಗೆಜ್ಜೆಯ ಸದ್ದು ಕೇಳಿಸಿತು, ರಥಗಳು ಬಂದವು, ಮನೆಗಳೆಲ್ಲಾ ಐಶ್ವರ್ಯದಿಂದ ತುಂಬಿದವು. ಅಂದಿನಿಂದ ಈ ವ್ರತವು ಲೋಕದಲ್ಲಿ ಪ್ರಸಿದ್ಧವಾಯಿತು.

ಈ ಕಥೆಯು ಒಂದು ಸತ್ಯವನ್ನು ಸಾರುತ್ತದೆ. ಸಂಪತ್ತು ಎಂದರೆ ಕೇವಲ ಚಿನ್ನ, ಬೆಳ್ಳಿಯಲ್ಲ. ಸಂತೋಷ, ಆರೋಗ್ಯ, ಸಂತಾನ ಭಾಗ್ಯ, ಜ್ಞಾನ ಮತ್ತು ಮನಶ್ಶಾಂತಿ ಇವೆಲ್ಲವೂ ಲಕ್ಷ್ಮಿಯ ಸ್ವರೂಪಗಳೇ.

ವರಮಹಾಲಕ್ಷ್ಮಿ ವ್ರತದ ಮಹತ್ವ 1. ಅಷ್ಟಲಕ್ಷ್ಮಿಯ ಆರಾಧನೆ: ಈ ಒಂದು ವ್ರತದಲ್ಲಿ ಆದಿಲಕ್ಷ್ಮಿ, ಧನಲಕ್ಷ್ಮಿ, ಧಾನ್ಯಲಕ್ಷ್ಮಿ, ಗಜಲಕ್ಷ್ಮಿ, ಸಂತಾನಲಕ್ಷ್ಮಿ, ವೀರಲಕ್ಷ್ಮಿ, ವಿಜಯಲಕ್ಷ್ಮಿ ಮತ್ತು ವಿದ್ಯಾಲಕ್ಷ್ಮಿ ಎಂಬ ಎಂಟು ರೂಪಗಳನ್ನೂ ಪೂಜಿಸಿದಂತೆ. 2. ಸೌಮಾಂಗಲ್ಯ ವೃದ್ಧಿ: ಸುಮಂಗಲಿಯರು ತಮ್ಮ ಪತಿಯ ಆಯುರಾರೋಗ್ಯ, ದೀರ್ಘಾಯುಷ್ಯ ಮತ್ತು ಕುಟುಂಬದ ಕಲ್ಯಾಣಕ್ಕಾಗಿ ಈ ವ್ರತವನ್ನು ಆಚರಿಸುತ್ತಾರೆ. 3. ಶ್ರಾವಣದ ಪಾವಿತ್ರ್ಯ: ಶ್ರಾವಣ ಮಾಸವು ದೇವತೆಗಳಿಗೆ ಅತ್ಯಂತ ಪ್ರಿಯವಾದ ಮಾಸ. ಈ ಮಾಸದಲ್ಲಿ ಮಾಡುವ ಯಾವುದೇ ಪೂಜೆಯೂ ಬೇಗನೆ ಫಲ ನೀಡುತ್ತದೆ. ಅದರಲ್ಲೂ ಶುಕ್ರವಾರವು ಲಕ್ಷ್ಮಿಗೆ ಮೀಸಲಾದ ದಿನ. 4. ಸಾಮೂಹಿಕತೆಯ ಸಂಕೇತ: ಇದು ಒಬ್ಬರೇ ಮಾಡುವ ವ್ರತವಲ್ಲ. ನೆರೆಹೊರೆಯವರು, ಬಂಧುಗಳು ಎಲ್ಲರೂ ಸೇರಿ ಮಾಡುವಾಗ ಸಾಮಾಜಿಕ ಬಾಂಧವ್ಯ ಬೆಸೆಯುತ್ತದೆ. ವ್ರತದ ಸಿದ್ಧತೆಗಳು

ವ್ರತದ ಹಿಂದಿನ ದಿನವೇ ಮನೆಯನ್ನು ಶುಚಿಗೊಳಿಸಬೇಕು. ವರಮಹಾಲಕ್ಷ್ಮಿಯ ವಿಗ್ರಹ ಅಥವಾ ಫೋಟೋವನ್ನು ಇಡುವ ಜಾಗವನ್ನು ಸೆಗಣಿಯಿಂದ ಸಾರಿಸಿ ರಂಗೋಲಿ ಹಾಕಬೇಕು. ಮರುದಿನ ಬೆಳಿಗ್ಗೆ ಬೇಗ ಎದ್ದು ಸ್ನಾನ ಮಾಡಿ, ಹೊಸ ಬಟ್ಟೆ ಅಥವಾ ಮಡಿ ಬಟ್ಟೆ ಧರಿಸಬೇಕು.ಪೂಜೆಗೆ ಬೇಕಾದ ಸಾಮಗ್ರಿಗಳು: ಅರಿಶಿನ, ಕುಂಕುಮ, ಶ್ರೀಗಂಧ, ಹೂವುಗಳು, ವಿಶೇಷವಾಗಿ ಕಮಲದ ಹೂವು, ಹಣ್ಣುಗಳು, ತೆಂಗಿನಕಾಯಿ, ವೀಳ್ಯದೆಲೆ, ಅಡಿಕೆ, ಬಳೆಗಳು, ಹೊಸ ಸೀರೆ, ಚಿನ್ನಾಭರಣ, ಕಲಶಕ್ಕೆ ಬೇಕಾದ ಬೆಳ್ಳಿ ಅಥವಾ ಹಿತ್ತಾಳೆ ಚೊಂಬು, ಅಕ್ಕಿ, ದಾರ, ಮಾವಿನ ಎಲೆಗಳು.

### ಪೂಜಾ ವಿಧಾನ

ವರಮಹಾಲಕ್ಷ್ಮಿ ಪೂಜೆಯ ಅತ್ಯಂತ ಸುಂದರ ಭಾಗವೆಂದರೆ ಕಲಶ ಸ್ಥಾಪನೆ. ಮಂಟಪದ ಮಧ್ಯದಲ್ಲಿ ಅಕ್ಕಿಯನ್ನು ಹರಡಿ, ಅದರ ಮೇಲೆ ಅರಿಶಿನದಿಂದ ಲಕ್ಷ್ಮಿಯನ್ನು ಬರೆದು, ಮಾವಿನ ಎಲೆಗಳಿಂದ ಅಲಂಕರಿಸಿದ ಕಲಶವನ್ನು ಇಡಬೇಕು. ಕಲಶದೊಳಗೆ ನೀರು, ನಾಣ್ಯ, ಅಕ್ಕಿ, ಅರಿಶಿನ ಕೊಂಬು ಹಾಕಬೇಕು. ಕಲಶದ ಮೇಲೆ ತೆಂಗಿನಕಾಯಿ ಇಟ್ಟು, ಅದಕ್ಕೆ ಅರಿಶಿನ ಕುಂಕುಮ ಹಚ್ಚಿ, ಹೊಸ ಸೀರೆಯನ್ನು ಉಡಿಸಿ, ಮುಖವಾಡ ಅಥವಾ ಲಕ್ಷ್ಮಿ ಮುಖವನ್ನು ಇಡಬೇಕು. ಇದಕ್ಕೆಲ್ಲಾ ಹೂವಿನ ಹಾರ, ಬಳೆ, ಕರಿಮಣಿ ಸರದಿಂದ ಶೃಂಗರಿಸಿದಾಗ ಸಾಕ್ಷಾತ್ ಮಹಾಲಕ್ಷ್ಮಿಯೇ ಮನೆಯಲ್ಲಿ ನೆಲೆಸಿದಂತೆ ಭಾಸವಾಗುತ್ತದೆ.

ನಂತರ ಸಂಕಲ್ಪ ಮಾಡಿ, ಅಷ್ಟೋತ್ತರ ಶತನಾಮಾವಳಿ, ಲಕ್ಷ್ಮಿ ಸ್ತೋತ್ರ, ಕನಕಧಾರಾ ಸ್ತೋತ್ರಗಳನ್ನು ಪಠಿಸಬೇಕು. ಪ್ರತಿಯೊಂದು ನಾಮಕ್ಕೂ ಹೂವು, ಅಕ್ಷತೆಗಳಿಂದ ಅರ್ಚನೆ ಮಾಡಬೇಕು.

ಪೂಜೆಯ ಕೊನೆಯಲ್ಲಿ ಕಥೆಯನ್ನು ಕೇಳಬೇಕು. ಕಥೆ ಕೇಳದೆ ವ್ರತ ಪೂರ್ಣವಾಗುವುದಿಲ್ಲ ಎಂಬ ನಂಬಿಕೆಯಿದೆ.

### ನೈವೇದ್ಯ ಮತ್ತು ಮಂಗಳಾರತಿ

ಲಕ್ಷ್ಮಿಗೆ ಅತ್ಯಂತ ಪ್ರಿಯವಾದದ್ದು ಸಿಹಿ. ಹೋಳಿಗೆ, ಪಾಯಸ, ಲಡ್ಡು, ಚಿತ್ರಾನ್ನ, ಹುಳಿಯೋಗರೆ, ವಡೆ, ಪುಳಿಯೋಗರೆ ಮತ್ತು ವಿವಿಧ ಹಣ್ಣುಗಳನ್ನು ನೈವೇದ್ಯ ಮಾಡಬೇಕು. ಕೆಲವು ಕಡೆಗಳಲ್ಲಿ 5, 9 ಅಥವಾ 12 ಬಗೆಯ ಭಕ್ಷ್ಯಗಳನ್ನು ಮಾಡುವ ಸಂಪ್ರದಾಯವಿದೆ.

ನಂತರ ದೀಪಾರತಿ, ಕರ್ಪೂರದ ಆರತಿಯೊಂದಿಗೆ ಪೂಜೆಯನ್ನು ಮುಕ್ತಾಯಗೊಳಿಸಬೇಕು. ಪೂಜೆಯಾದ ನಂತರ ಸುಮಂಗಲಿಯರಿಗೆ ಅರಿಶಿನ, ಕುಂಕುಮ, ಬಳೆ, ಸೀರೆ, ದಕ್ಷಿಣೆ ನೀಡಿ ಅವರ ಆಶೀರ್ವಾದ ಪಡೆಯಬೇಕು. ಇದನ್ನು ವಾಯನ ನೀಡುವುದು ಎನ್ನುತ್ತಾರೆ.

### ಇಂದಿನ ದಿನಗಳಲ್ಲಿ ವರಮಹಾಲಕ್ಷ್ಮಿಯ ಪ್ರಸ್ತುತತೆ

ಇಂದು ಬದುಕು ಯಾಂತ್ರಿಕವಾಗಿದೆ. ಹಣದ ಹಿಂದೆ ಓಡುವ ಭರಾಟೆಯಲ್ಲಿ ಮನಶ್ಶಾಂತಿಯನ್ನು ಕಳೆದುಕೊಂಡಿದ್ದೇವೆ. ವರಮಹಾಲಕ್ಷ್ಮಿ ವ್ರತವು ನಮಗೆ ನಿಲ್ಲಲು ಒಂದು ನೆಪವನ್ನು ನೀಡುತ್ತದೆ. ಒಂದು ದಿನ ಮನೆಯನ್ನೆಲ್ಲಾ ಅಲಂಕರಿಸಿ, ಕುಟುಂಬದೊಂದಿಗೆ ಕುಳಿತು, ದೇವರ ನಾಮವನ್ನು ಸ್ಮರಿಸಿ, ಕೈಯಿಂದ ಸಿಹಿ ಮಾಡಿ ಹಂಚುವ ಸಂಸ್ಕೃತಿ ಮನಸ್ಸಿಗೆ ಅಪಾರ ನೆಮ್ಮದಿ ನೀಡುತ್ತದೆ.

ಈ ಹಬ್ಬವು ಸ್ತ್ರೀ ಶಕ್ತಿಯ ಆರಾಧನೆಯೂ ಹೌದು. ಮನೆಯ ಹೆಣ್ಣುಮಗಳೇ ಮನೆಯ ಲಕ್ಷ್ಮಿ ಎಂಬುದನ್ನು ಗೌರವಿಸುವ ದಿನವಿದು. ಅವಳ ತ್ಯಾಗ, ಪ್ರೀತಿ, ಶ್ರಮಕ್ಕೆ ಒಂದು ನಮನ.



ವರಮಹಾಲಕ್ಷ್ಮಿ ಕೇವಲ ದೇವಾಲಯದಲ್ಲಿ ಇಲ್ಲ, ಅವಳು ನಮ್ಮ ಮನೆಯ ಸ್ವಚ್ಛತೆಯಲ್ಲಿ, ನಮ್ಮ ಮಾತಿನ ಮಧುರತೆಯಲ್ಲಿ, ನಮ್ಮ ಕೆಲಸದ ಪ್ರಾಮಾಣಿಕತೆಯಲ್ಲಿ, ನಮ್ಮ ಹೃದಯದ ದಯೆಯಲ್ಲಿ ನೆಲೆಸಿದ್ದಾಳೆ. ಮನೆಯನ್ನು, ಮನಸ್ಸನ್ನು ಶುಚಿಯಾಗಿ ಇಟ್ಟುಕೊಂಡು, ಸಕಾರಾತ್ಮಕವಾಗಿ ಬದುಕಿದರೆ ಲಕ್ಷ್ಮಿ ಸದಾ ನಮ್ಮೊಂದಿಗೆ ಇರುತ್ತಾಳೆ.

ಅಂತಹ ಜ್ಞಾನ, ಧನ, ಧಾನ್ಯ, ಸಂತೋಷವನ್ನು ಕರುಣಿಸುವ ವರಮಹಾಲಕ್ಷ್ಮಿಯ ಕೃಪೆ ಸರ್ವರ ಮೇಲೂ ಇರಲಿ.

ಲೇಖನ
ಮಂಡ್ಯ.ಮ.ನಾ.ಉಡುಪ
ಸಾಹಿತಿ ಮಂಡ್ಯ



# ಸ್ಥಗಿತಗೊಂಡ ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಆಕ್ಷೇಪಣೆ ಸಲ್ಲಿಸಲು ಮನವಿ

■ **ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ವಿಜಯಪುರ ತಾಲೂಕಿನ ವ್ಯಾಪ್ತಿಯಲ್ಲಿನ ಬೈಲಾದಲ್ಲಿನ ಉದ್ದೇಶಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸದೇ ಹಲವು ವರ್ಷಗಳಿಂದ ಸ್ಥಗಿತಗೊಂಡಿರುವ ಸಹಕಾರ ಸಂಘಗಳನ್ನು ಸಮಾಪನೆಗೊಳಿಸಿ ನೋಂದಣಿ ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಈ ಕುರಿತು ಸಾರ್ವಜನಿಕರಿಂದ ಮಾಹಿತಿ ಹಾಗೂ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ಈ ಸಹಕಾರ ಸಂಘಗಳು ತಮ್ಮ ನೋಂದಾಯಿತ ಸ್ಥಳ ಆಡಳಿತ ಮಂಡಳಿ ಮಾಹಿತಿ ಲಭ್ಯವಿರುವುದಿಲ್ಲ. ಅಲ್ಲದೆ, ಹಲವು ವರ್ಷಗಳಿಂದ ಸಂಘಗಳ ವ್ಯವಹಾರಗಳ ಲೆಕ್ಕಪರಿಶೋಧನೆಯೂ ನಡೆದಿರುವುದಿಲ್ಲ. ಸಂಘಗಳ ಕೊಡತಕ್ಕ ಹಾಗೂ ಬರತಕ್ಕ ಬಾಬುಗಳ ಬಗ್ಗೆಯೂ ಯಾವುದೇ ಮಾಹಿತಿ ಲಭ್ಯವಿರುವುದಿಲ್ಲ.

ಈ ಹಿನ್ನೆಲೆಯಲ್ಲಿ, ಮಾನ್ಯ ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಳಗಾವಿ ಪ್ರಾಂತ, ಬೆಳಗಾವಿ ಹಾಗೂ ಮಾನ್ಯ ಸಹಕಾರ ಸಂಘಗಳ ಉಪನಿಬಂಧಕರು, ವಿಜಯಪುರ ಅವರು ಈ ಕುರಿತು ಆದೇಶ ಹೊರಡಿಸಿ ಸಮಾಪನಾಧಿಕಾ–ರಿಯನ್ನು ನೇಮಕ ಮಾಡಿರುತ್ತಾರೆ.

ಆಕ್ಷೇಪಣೆಗೆ 7 ದಿನಗಳ ಕೆಳಕಂಡ ಸಹಕಾರ ಸಂಘಗಳೊಂದಿಗೆ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗಳು ಕೊಡತಕ್ಕ ಅಥವಾ ಬರತಕ್ಕ ಬಾಕಿ ಹೊಂದಿದ್ದಲ್ಲಿ, ಸಂಬಂಧಿಸಿದವರು ಸೂಕ್ತ ದಾಖಲೆಗಳೊಂದಿಗೆ ಈ ಪ್ರಕಟಣೆ ಹೊರಬಿದ್ದ 07 ದಿನಗಳೊಳಗಾಗಿ ಸಮಾಪನಾಧಿಕಾರಿಯ ಕಚೇ–ರಿಯನ್ನು ಸಂಪರ್ಕಿಸಿ ಮಾಹಿತಿ ಅಥವಾ ಆಕ್ಷೇಪಣೆ ಸಲ್ಲಿಸುವಂತೆ ಕೋರಲಾಗಿದೆ.

ಸಹಕಾರ ಸಂಘಗಳಾದ ನವಕಲ್ಯಾಣ ವರ್ಧಮಾನ ಪತ್ತಿನ ಸಹಕಾರ ಸಂಘ, ವಿಜಯಪುರ, ಮುನ್ಸಿಪಲ್ ಕನ್ಸರ್ವೆನ್ಸಿ ನೌಕರರ ಪತ್ತಿನ ಸಹಕಾರ ಸಂಘ, ವಿಜಯಪುರ, ಕುಬೇರ ಪತ್ತಿನ ಸಹಕಾರ ಸಂಘ, ವಿಜಯಪುರ, ಶಿಕ್ಷಣ ಪ್ರಸಾರಕ ಮಂಡಳಿ ನೌಕರರ ಪತ್ತಿನ ಸಹಕಾರ ಸಂಘ, ವಿಜಯಪುರ, ತಾಲೂಕು ಎಸ್‌ಸಿ/ಎಸ್‌ಟಿ ಗೃಹ ನಿರ್ಮಾಣ ಸಹಕಾರ ಸಂಘ, ವಿಜಯಪುರ, ಶ್ರೀ ನಿರಂಜನ ಅವಧೂತ ಪತ್ತಿನ ಸಹಕಾರ ಸಂಘ, ವಿಜಯಪುರ, ಶ್ರೀಶೈಲ ಮಲ್ಲಿಕಾರ್ಜುನ ಪತ್ತಿನ ಸಹಕಾರ ಸಂಘ, ವಿಜಯಪುರ, ಕುಬೇರ ಕೋ–ಆಪ್ ಕ್ರೆಡಿಟ್ ಸೊಸೈಟಿ ಲಿ., ವಿಜಯಪುರ ಹಾಗೂ ಲೋಕಮಾನ್ಯ ಬಾಲಗಂಗಾಧರ ತಿಲಕ ಪತ್ತಿನ ಸಹಕಾರ ಸಂಘ, ವಿಜಯಪುರ ಸೇರಿವೆ ಎಂದು ಸಮಾಪನಾಧಿಕಾ–ರಿಗಳು, ಸಹಕಾರ ಸಹಕಾರ ಸಂಘಗಳ ನಿರೀಕ್ಷಕರು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ವಿಜಯಪುರ ಉಪ ವಿಭಾಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಕೆಲಸಕ್ಕಾಗಿ ಜಾಬ್ ಕಾರ್ಡು ಪಡೆಯೋದು ನಿಮ್ಮ ಹಕ್ಕು

■ **ಉದಯರಶ್ಮಿ ದಿನಪತ್ರಿಕೆ**

ಇಂಡಿ: ವಿಬಿ ಜಿ ರಾಮಜಿ ಯೋಜನೆಯಡಿ ತಾಲೂಕಿನಲ್ಲಿ ಬಬಲಾದ ಗ್ರಾ.ಪಂ ವ್ಯಾಪ್ತಿಯ ಘನ ತಾಜ್ಯ ವಿಲೇವಾರಿ ಘಟಕದ ಹತ್ತಿರ ಅರಣ್ಯ ಪ್ರದೇಶದಲ್ಲಿ ಟ್ರೆಂಚಳ ನಿರ್ಮಾಣ ಕಾಮಗಾ–ರಿಯನ್ನು ಇಂಡಿ ತಾಲೂಕಾ ಇಓ ಮಹಾದೇವಪ್ಪ ಏವೂರ ಹಾಗೂ ಸಹಾಯಕ ನಿರ್ದೇಶಕ ಸಂಜಯ ಖಡಗೇಕರ ಭೇಟಿ ನೀಡಿ ಪರಿಶೀಲಿಸಿದರು.

ಕಾಮಗಾರಿ ಸ್ಥಳದಲ್ಲಿ 64 ಮಹಿಳೆಯರು 10 ಪುರುಷರು ಒಟ್ಟು 74 ಕೂಲಿಕಾರರು ಭಾಗವಹಿಸಿದ್ದರು.

ಮಣ್ಣಿನ ಸಂರಕ್ಷಣೆ ಹಾಗೂ ಮಳೆ ನೀರು ಸಂಗ್ರಹಣೆಗೆ ಪೂರಕ ಕಾಮಗಾರಿಯಾಗಿದೆ ಎಂದರು.

ಕೂಲಿಕಾರರ ಜೊತೆಗೆ ಸಂವಾದ ನಡೆಸಿ ವಿಬಿ ಜಿ ರಾಮ ಜಿ ಯೋಜನೆಯಡಿ ಪ್ರತಿ ಕುಟುಂಬಕ್ಕೂ ಒಂದು ಮಾನವ ದಿನಕ್ಕೆ 382 ರೂ ರಂತೆ 125 ದಿನಗಳ ಉದ್ಯೋಗ ಖಾತ್ರಿ ಪಡಿಸುವಲ್ಲಿ ಜಾಬ ಕಾರ್ಡ ಪ್ರಮುಖ ಪಾತ್ರ ವಹಿಸುತ್ತದೆ. ಕೆಲಸಕ್ಕಾಗಿ ಜಾಬ ಕಾರ್ಡ ಪಡೆಯುವದು ನಿಮ್ಮ ಹಕ್ಕಾಗಿದೆ.

ನಿಮ್ಮ ಜಾಬ ಕಾರ್ಡು ನಿಮಗೆ ಉದ್ಯೋಗ ಖಾತ್ರಿ ನೀಡುವದರ ಜೊತೆಗೆ ವಾರ್ಷಿಕ 47750 ರೂ ವೇತನದ ಖಾತ್ರಿ ನೀಡುತ್ತದೆ. ಇದಕ್ಕಾಗಿ ಎಲ್ಲರೂ ಜಾಬ ಕಾರ್ಡ ಗಳನ್ನು ಕಡ್ಡಾಯವಾಗಿ ಪಡೆದು ಈ ಯೋಜನೆಯ ಪಾಲುದಾರರಾಗಿ ಎಂದು ಮಹಾದೇವಪ್ಪ ಏವೂರ ಹೇಳಿದರು.

ತಾಲೂಕಿನ ಬಬಲಾದ ಗ್ರಾ.ಪಂ ನಲ್ಲಿ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ ಆಂಡ ಅಜೀವಿಕಾ ಮಿಷನ್ ಗ್ರಾಮೀಣ ಯೋಜನೆಯ ಐಇಸಿ ಕಾರ್ಯಕ್ರಮದಡಿ ಜಾಬ ಕಾರ್ಡ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಅ. 15 ರಿಂದ ತಾಲೂಕಿನಾದಂತಗ್ರಾ.ಪಂ ಮಟ್ಟದಲ್ಲಿ ಜಾಬ ಕಾರ್ಡ ಮೇಳ ಆಯೋಜಿಸಲಾಗಿದೆ. ಕೆಲಸಕ್ಕಾಗಿ ಅರ್ಜಿ ಸಲ್ಲಿಸುವ ಕುಟುಂಬಗಳಿಗೆ ನಿಯಮಾನುಸಾರ ಸ್ವೀಕೃತಿ ನೀಡುವ ವ್ಯವಸ್ಥೆಯನ್ನು ಗ್ರಾ.ಪಂ ನಲ್ಲಿ ಮಾಡಲಾಗುತ್ತಿದೆ ಎಂದರು.

**ಯುವಜನರ ಸಬಲೀಕರಣ, ಸಾಮಾಜಿಕ ಸಾಮರಸ್ಯ ಹಾಗೂ ಸಮುದಾಯ ಅಭಿವೃದ್ಧಿಗೆ 'ಭಾರತ್ ಜೋಡೋ ಯುವ ಸಂಘ' ಯೋಜನೆ**

# ಯುವಶಕ್ತಿಯನ್ನು ಒಗ್ಗೂಡಿಸಿ ಸೌಹಾರ್ದ ಕರ್ನಾಟಕ ನಿರ್ಮಾಣಕ್ಕೆ ಮಹತ್ವದ ಹೆಜ್ಜೆ

■ **ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ಯುವಜನರನ್ನು ಸಂಘಟಿಸಿ, ಅವರಲ್ಲಿರುವ ಶಕ್ತಿ, ಪ್ರತಿಭೆ, ಸೃಜನಶೀಲತೆ ಹಾಗೂ ನಾಯಕತ್ವ ಗುಣಗಳನ್ನು ಸಮಾಜದ ಅಭಿವೃದ್ಧಿಗೆ ಬಳಸಿಕೊಳ್ಳುವ ಉದ್ದೇಶದಿಂದ ಭಾರತ್ ಜೋಡೋ ಯುವ ಸಂಘ ಯೋಜನೆ ಜಾರಿಗೆ ತರಲು ಅನುಷ್ಠಾನ ಮಾರ್ಗಸೂಚಿಗಳನ್ನು ರೂಪಿಸಲಾಗಿದೆ. ಗ್ರಾಮೀಣ ಮತ್ತು ನಗರ ಪ್ರದೇಶಗಳ ಯುವಜನರಿಗೆ ಸ್ಥಳೀಯ ಮಟ್ಟದಲ್ಲೇ ವ್ಯವಸ್ಥಿತ ವೇದಿಕೆ ಕಲ್ಪಿಸಿ, ಅವರನ್ನು ಸಮುದಾಯ ಅಭಿವೃದ್ಧಿ, ಸಾಮಾಜಿಕ ಸಾಮರಸ್ಯ, ಪರಿಸರ ಸಂರಕ್ಷಣೆ, ಕ್ರೀಡೆ, ಆರೋಗ್ಯ, ಕೌಶಲ್ಯಾಭಿವೃದ್ಧಿ ಹಾಗೂ ತಳಮಟ್ಟದ ಆಡಳಿತದಲ್ಲಿ ಸಕ್ರಿಯ ಪಾಲುದಾರರನ್ನಾಗಿ ಮಾಡುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ರಾಜ್ಯದ ಗ್ರಾಮ ಪಂಚಾಯಿತಿಗಳು ಹಾಗೂ ನಗರ ವಾರ್ಡ್‌ಗಳನ್ನು ಆಧಾರವಾಗಿಟ್ಟುಕೊಂಡು ಒಟ್ಟು 10,000 ಭಾರತ್ ಜೋಡೋ ಯುವ ಸಂಘಗಳನ್ನು ಸ್ಥಾಪಿಸಿ, 50 ಲಕ್ಷಕ್ಕೂ ಅಧಿಕ ಯುವಕರನ್ನು ಸಂಘಟಿಸುವ ಗುರಿ ಹೊಂದಲಾಗಿದೆ.ಒಂದು ಸಂಘ ರಚನೆಗೆ ಕನಿಷ್ಠ 100 ಸದಸ್ಯರು ಅಗತ್ಯ. ಆಧಾರ್ ಆಧಾರಿತ ನೋಂದಣಿ ಮೂಲಕ ಬಿಜೆವೈಎಸ್ ಪೋರ್ಟಲ್, ಮೊಬೈಲ್‌ಯ್ಯಾಪ್ ಹಾಗೂ ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಸೇರಿದಂತೆ ನಾಗರಿಕ ಸೇವಾ ಕೇಂದ್ರಗಳ ಮೂಲಕ ನೋಂದಣಿ ಮಾಡಿಕೊಳ್ಳಲು ಅವಕಾಶವಿದೆ. ಪ್ರತಿ ಸದಸ್ಯ–ರಿಗೆ 10 ನೋಂದಣಿ ಶುಲ್ಕ ನಿಗದಿಪಡಿಸಲಾಗಿದ್ದು, ಒಬ್ಬ ಸದಸ್ಯರು ಒಂದು ಸಂಘದಲ್ಲಿ ಮಾತ್ರ ಸದಸ್ಯರಾಗಬಹುದು. ಪ್ರತಿಯೊಂದು ಸಂಘವನ್ನು ಕರ್ನಾಟಕ ಸೊಸೈಟೀಸ್ ನೋಂದಣಿ ಕಾಯ್ದೆ, 1960ರಡಿ ನೋಂದಾಯಿಸುವ ವ್ಯವಸ್ಥೆ ಮಾಡಲಾಗಿದೆ. ಸಂಘವು ಅಧ್ಯಕ್ಷರು, ಉಪಾಧ್ಯಕ್ಷರು, ಖಜಾಂಚಿ ಹಾಗೂ 12 ಕಾರ್ಯಕಾರಿ ಸದಸ್ಯರನ್ನು ಒಳಗೊಂಡ 15 ಸದಸ್ಯರ ಕಾರ್ಯಕಾರಿ ಸಮಿತಿಯನ್ನು ಹೊಂದಿರಲಿದೆ. ಸಮಿತಿಯಲ್ಲಿ ಮಹಿಳೆಯರು, ಎಸ್ಸಿ–ಎಸ್ಟಿ, ಒಬಿಸಿ, ಅಲ್ಪಸಂಖ್ಯಾತರು ಸೇರಿದಂತೆ ವಿವಿಧ ಸಾಮಾಜಿ–ಕ ವರ್ಗಗಳಿಗೆ ಪ್ರಾತಿನಿಧ್ಯ ಕಲ್ಪಿಸಲಾಗಿದ್ದು, ಸಂಘದ ಅವಧಿಯನ್ನು ಎರಡು ವರ್ಷಗಳಿಗೆ ನಿಗದಿಪಡಿಸಲಾಗಿದೆ.

ಭಾರತ್ ಜೋಡೋ ಯುವ ಸಂಘಕ್ಕೆ ವಾರ್ಷಿಕ 10 ಲಕ್ಷ ಅನುದಾನ ನೀಡಲಾಗುತ್ತದೆ. ಇದರಲ್ಲಿ 2 ಲಕ್ಷ ಬಂಡವಾಳ ಅನುದಾನ ಹಾಗೂ 8 ಲಕ್ಷ ಕಾರ್ಯಕಾರಿ ಅನುದಾನ




ಒಳಗೊಂಡಿದ್ದು, ಮೂರು ಕಂತುಗಳಲ್ಲಿ ಅನುದಾನ ಬಿಡುಗಡೆ ಮಾಡಲಾಗುತ್ತದೆ. ಈ ಅನುದಾನವನ್ನು ಕ್ರೀಡೆ ಮತ್ತು ಫಿಟ್ನೆಸ್, ಗ್ರಾಮೀಣ ಕ್ರೀಡಾಕೂಟ, ಯೋಗ ಶಿಬಿರ, ಆರೋಗ್ಯ ಮತ್ತು ಯೋಗಕ್ಷೇಮ, ರಕ್ತದಾನ, ಪೌಷ್ಟಿಕಾಂಶ ಜಾಗೃತಿ, ಕೆರೆಕಲ್ಯಾಣಿ ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆ, ಸಸಿ ನೆಡುವಿಕೆ, ಜಲ ಸಂರಕ್ಷಣೆ, ತ್ಯಾಜ್ಯ ನಿರ್ವಹಣೆ, ಪರಿಸರ ಸಂರಕ್ಷಣೆ ಸೇರಿದಂತೆ ವಿವಿಧ ಚಟುವಟಿಕೆಗಳಿಗೆ ಬಳಸಿಕೊಳ್ಳಬೇಕು. ಯುವಕರಿಗೆ ಡಿಜಿಟಲ್ ಸಾಕ್ಷರತೆ, ವೃತ್ತಿ ಮಾರ್ಗದರ್ಶನ, ಉದ್ಯಮಶೀಲತೆ, ಜೀವನ ಕೌಶಲ್ಯ ಹಾಗೂ ನಾವೀನ್ಯತೆ ಕುರಿತು ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಸಂಸ್ಕೃತಿ ಮತ್ತು ಸಾಮಾಜಿಕ ಸಾಮರಸ್ಯಕ್ಕೆ ಆದ್ಯತೆ ನೀಡುವ ಮೂಲಕ ಸಂವಿಧಾನದ ಮೌಲ್ಯಗಳು, ಭಾವೈಕ್ಯತೆ ಹಾಗೂ ಸಹೋದರತ್ವದ ಕುರಿತು ಜಾಗೃತಿ ಮೂಡಿಸಬೇಕು. ಬಾಲ್ಯ ವಿವಾಹ, ಅಪೌಷ್ಟಿಕತೆ, ಧೂಮಪಾನ, ಮದ್ಯಪಾನ ಹಾಗೂ ಮಾದಕ ವಸ್ತುಗಳ ವಿರುದ್ಧ ಜನಜಾಗೃತಿ ಮೂಡಿಸುವುದರ ಜೊತೆಗೆ ಸೈಬರ್ ಸುರಕ್ಷತೆ, ಸಂಚಾರ ಸುರಕ್ಷತೆ, ವಿಪತ್ತು ನಿರ್ವಹಣೆ, ಕೃಷಿ ಮತ್ತು ಗ್ರಾಮೀಣ ನಾವೀನ್ಯತೆ ಸೇರಿದಂತೆ ಹಲವು ಸಮಾಜಮುಖಿ ಚಟುವಟಿಕೆಗಳನ್ನು ಕೈಗೊಳ್ಳಬೇಕು. ಸ್ವಾತಂತ್ರ ದಿನಾಚರಣೆ, ಗಣರಾಜ್ಯೋತ್ಸವ, ಗಾಂಧಿ ಜಯಂತಿ, ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಹಾಗೂ ಬುದ್ಧ ಜಯಂತಿ ಸೇರಿದಂತೆ ಪ್ರಮುಖ ದಿನಗಳನ್ನು ಜನರ ಸಹಭಾಗಿತ್ವದೊಂದಿಗೆ ಆಚರಿಸುವುದು ಕಡ್ಡಾಯವಾಗಿದೆ.

ಪ್ರತಿಯೊಂದು ಸಂಘವು ವಾರ್ಷಿಕ ಚಟುವಟಿಕೆಗಳ ಕ್ಯಾಲೆಂಡರ್ ಸಿದ್ಧಪಡಿಸಿ, ಪ್ರತಿ ತಿಂಗಳು ಸಭೆ ನಡೆಸಬೇಕು. ಕೈಗೊಂಡ ಪ್ರತಿಯೊಂದು ಚಟುವಟಿಕೆಯ ವರದಿ ಹಾಗೂ ಜಿಯೋ–ಟ್ಯಾಗ್ ಮಾಡಿದ ಛಾಯಾಚಿತ್ರಗಳನ್ನು ಅಪ್ಲೋಡ್ ಮಾಡಬೇಕು. ಸಂಘಗಳ ಚಟುವಟಿಕೆಗಳಿಗೆ ಮಾರ್ಗದರ್ಶನ ನೀಡಲು ತರಬೇತುದಾರರನ್ನು ನಿಯೋಜಿಸುವುದರ ಜೊತೆಗೆ, ಉತ್ತಮವಾಗಿ ಕಾರ್ಯನಿರ್ವಹಿಸುವ ಸಂಘಗಳನ್ನು ಗುರುತಿಸಿ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ನೀಡುವ ವ್ಯವಸ್ಥೆಯೂ ಇರಲಿದೆ.

ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕಾಗಿ ರಾಜ್ಯದಿಂದ ಗ್ರಾಮ ಮಟ್ಟದವರೆಗೆ ಸಮಗ್ರ ಮೇಲ್ವಿಚಾರಣಾ ವ್ಯವಸ್ಥೆ ರೂಪಿಸಲಾಗಿದೆ. ರಾಜ್ಯ ಮಟ್ಟದಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಉಸ್ತುವಾರಿ ಸಮಿತಿ, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿ ಕಾರ್ಯನಿರ್ವಹಿಸಲಿವೆ.

ಗ್ರಾಮೀಣ ಪ್ರದೇಶದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಉಸ್ತುವಾ–ರಿಯಲ್ಲಿ ಉಪ ಕಾರ್ಯದರ್ಶಿಗಳು–ಯೋಜನಾ ನಿರ್ದೇಶಕರು ನೋಡಲ್ ಅನುಷ್ಠಾನಾಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದು, ತಾಲೂಕು ಮಟ್ಟದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಅಥವಾ ನಿಯೋಜಿತ ಅಧಿಕಾರಿಗಳು ಯೋಜನೆಯ ಅನುಷ್ಠಾನಕ್ಕೆ ಸಹಕರಿಸಲಿದ್ದಾರೆ. ನಗರ ಪ್ರದೇಶಗಳಲ್ಲಿ ಅಪರ ಜಿಲ್ಲಾಧಿಕಾರಿಗಳು ಹಾಗೂ ಜಿಬಿಎ ವ್ಯಾಪ್ತಿಯಲ್ಲಿ ಸಂಬಂಧಿತ ಕಾರ್ಪೊರೇಷನ್ ಆಯುಕ್ತರು ಜವಾಬ್ದಾರಿ ವಹಿಸಲಿದ್ದಾರೆ. ಯೋಜನೆಯನ್ನು ಮಿಷನ್ ಮೋಡ್‌ನಲ್ಲಿ ಜಾರಿಗೊಳಿಸಲು ಯೋಜನೆ ಮೇಲ್ವಿಚಾರಣಾ ಘಟಕವನ್ನು ಸ್ಥಾಪಿಸಲಾಗುತ್ತಿದ್ದು, ತಾಂತ್ರಿಕ ಬೆಂಬಲ, ಸಾಫ್ಟ್‌ವೇರ್ ನಿರ್ವಹಣೆ, ಹಣಕಾಸು ಮೇಲ್ವಿಚಾರಣೆ ಹಾಗೂ ಸಾಮರ್ಥ್ಯವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಿದೆ. ಒಟ್ಟಾರೆ, ಭಾರತ್ ಜೋಡೋ ಯುವ ಸಂಘವು ಯುವಕರನ್ನು ಕೇವಲ ಒಂದು ಸಂಘಟನೆಯಡಿ ಸೇರಿಸುವ ಯೋಜನೆಯಾಗಿರದೆ, ಯುವಶಕ್ತಿಯನ್ನು ಸಮಾಜದ ಅಭಿವೃದ್ಧಿಯೊಂದಿಗೆ ಜೋಡಿಸುವ ಸಮಗ್ರ ವೇದಿಕೆಯಾಗಿದೆ. ವಿವಿಧ ಜಾತಿ, ಧರ್ಮ, ಭಾಷೆ ಮತ್ತು ಸಮುದಾಯಗಳ ಯುವಕರನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ, ಸಾಮಾಜಿಕ ಸಾಮರಸ್ಯ, ಸಹೋದರತ್ವ, ಸಂವಿಧಾನಿಕ ಮೌಲ್ಯಗಳು ಹಾಗೂ ಜವಾಬ್ದಾ–ರಿಯುತ ನಾಗರಿಕತ್ವವನ್ನು ಬೆಳೆಸುವ ಮೂಲಕ ಸಶಕ್ತ ಯುವಜನತೆ, ಬಲಿಷ್ಠ ಸಮುದಾಯ ಹಾಗೂ ವಿಕಾಸಶೀಲ ಮತ್ತು ಸೌಹಾರ್ದಶೀಲ ಕರ್ನಾಟಕ ನಿರ್ಮಾಣಕ್ಕೆ ಈ ಯೋಜನೆ ಮಹತ್ವದ ಹೆಜ್ಜೆಯಾಗಲಿದೆ ಎಂದು ಜಿಲ್ಲಾ ಪಂಚಾಯತಿಯ ಪ್ರಕಟಣೆ ತಿಳಿಸಿದೆ.

# ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಆಕ್ಷೇಪಣೆ ಸಲ್ಲಿಸಲು ಮನವಿ

■ **ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ಜಿಲ್ಲೆಯ ಬಸವನಬಾಗೇವಾಡಿ, ಕೊಲ್ಹಾರ ಹಾಗೂ ನಿಡಗುಂದಿ ತಾಲೂಕುಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಣೆ ಸ್ಥಗಿತಗೊಳಿಸಿರುವ ಸಹಕಾರ ಸಂಘಗಳನ್ನು ಸಮಾಪನೆಗೊಳಿಸಿ ನೋಂದಣಿ ರದ್ದುಪಡಿಸಲು ಕ್ರಮವಹಿಸಲಾಗುತ್ತಿದೆ. ಈ ಕುರಿತು ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಈ ಸಹಕಾರ ಸಂಘಗಳು ನಿಯಮಾವಳಿಗಳಂತೆ ಕಾರ್ಯನಿರ್ವಹಿಸದೇ ಹಲವು ವರ್ಷಗಳಿಂದ ಸ್ಥಗಿ–ತಗೊಂಡಿದ್ದವು. ಈ ಹಿನ್ನೆಲೆಯಲ್ಲಿ ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿದ್ದು, ಸಮಾಪನಾಧಿಕಾರಿಯನ್ನೂ ನೇಮಕ ಮಾಡಿದ್ದಾರೆ.

ಈ ಸಂಘಗಳು ನೋಂದಾಯಿತ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅವುಗಳ ಆಡಳಿತ ಮಂಡಳಿ ಸದಸ್ಯರು ಅಥವಾ ಮುಖ್ಯ ಕಾರ್ಯನಿರ್ವಾಹಕರ (ಕಾರ್ಯದರ್ಶಿ) ಮಾಹಿತಿ ಲಭ್ಯವಿರುವುದಿಲ್ಲ. ಅಲ್ಲದೆ, ಸುದೀರ್ಘ ಅವಧಿಯಿಂದ ಲೆಕ್ಕ ಪರಿಶೋಧನೆಯೂ ನಡೆದಿರುವುದಿಲ್ಲ. ಆಕ್ಷೇಪಣೆಗೆ 7 ದಿನಗಳ ಗಡುವು:

ಈ ಕೆಳಗಿನ ಸಹಕಾರ ಸಂಘಗಳೊಂದಿಗೆ ಯಾವುದೇ ವ್ಯಕ್ತಿ ಅಥವಾ ಸಂಸ್ಥೆಗಳು ವ್ಯವಹಾರಿಕ ಬಾಕಿ (ಕೊಡತಕ್ಕ ಅಥವಾ ಬರತಕ್ಕ ಬಾಕಿಗಳು) ಹೊಂದಿದ್ದರೆ, ಸೂಕ್ತ ದಾಖಲಾತಿಗಳೊಂದಿಗೆ ಈ ಪ್ರಕಟಣೆ ಹೊರಬಿದ್ದ 07 ದಿನಗಳೊಳಗಾಗಿ ಬಸವನಬಾಗೇವಾಡಿಯ ಪಿಎಲ್‌ಡಿ ಬ್ಯಾಂಕ್ ಕಚೇರಿ ಕಟ್ಟಡದಲ್ಲಿರುವ ಸಹಕಾರ ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

ನಿಗದಿತ ಅವಧಿಯೊಳಗೆ ಯಾವುದೇ ಅರ್ಜಿ ಅಥ–'ವಾ ಆಕ್ಷೇಪಣೆಗಳು ಬಾರದಿದ್ದಲ್ಲಿ, ಆಕ್ಷೇಪಣೆಗಳಿಲ್ಲವೆಂದು ಪರಿಗಣಿಸಿ ನಿಯಮಾನುಸಾರ ಸಂಘಗಳ ಅಥಾವೆಯನ್ನು ಶೂನ್ಯಗೊಳಿಸಿ, ನೋಂದಣಿ ರದ್ದತಿಗೆ ಅಂತಿಮ ಕ್ರಮ ಕೈಗೊಳ್ಳಲಾಗುವುದು. ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ ಎಂದು ಸಮಾಪನಾಧಿಕಾರಿಗಳು ತಿಳಿಸಿದ್ದಾರೆ. ಶ್ರೀ ಸಿದ್ದೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘ ನಿ., ಮಣ್ಣೂರು,ನೇಕಾರ ಸಹಕಾರ ಉತ್ಪಾದಕ ಸಹಕಾರ ಸಂಘ ನಿ., ನಿಡಗುಂದಿ ತಾಲೂಕಿನ ವಂದಾಲ, ಸಜ್ಜನ ಎಣ್ಣೆ ಹಿಂಡಿ ಉತ್ಪಾದಕರ ಸಹಕಾರ ಸಂಘ ನಿ., ನಿಡಗುಂದಿ, ಬಾಗೇವಾಡಿ ಗ್ರಾಮೋದ್ಯೋಗ ಕೈಗಾರಿಕಾ ಸಹಕಾರ ಸಂಘ ನಿ., ಬಸವನಬಾಗೇವಾಡಿ,ಶ್ರೀ ಗುರುಪರಮಾನಂದ ಪ್ರಾಥಮಿಕ ಗ್ರಾಹಕರ ಸಹಕಾರ ಸಂಘ, ದಿಂಡವಾರ, ದಿ ಬ.ಬಾಗೇವಾಡಿ ಹೈಸ್ಕೂಲ ಶಿಕ್ಷಕರ ಪತ್ತಿನ ಸಹಕಾರ ಸಂಘ, ಬಸವನಬಾಗೇವಾಡಿ, ಸುಜಲ ಕೈಮಗ್ಗ ಮತ್ತು ನೇಕಾರರ ಸಹಕಾರ ಸಂಘ ನಿಡಗುಂದಿ ತಾಲೂಕಿನ ಚಿಮ್ಮಲಗಿ,ಟಿಪ್ಪು ಸುಲ್ತಾನ ಅಲ್ಪಸಂಖ್ಯಾತರ ವಿವಿಧೋದ್ದೇಶಗಳ ಸಹಕಾರ ಸಂಘ, ಮನಗೂಳಿ,ಶ್ರೀ ಬನಶಂಕರಿ ನೇಕಾರರ ಸಹಕಾರ ಸಂಘ ನಿ., ಕೊಲ್ಹಾರ, ಪ್ರಾಥಮಿಕ ಕೈಮಗ್ಗ ನೇಕಾರರ ಸಹಕಾರ ಸಂಘ ನಿ., ನಿಡಗುಂದಿ,ಶ್ರೀ ದಾನೇಶ್ವರಿ ಕೈಮಗ್ಗ ನೇಕಾರರ ಸಹಕಾರಿ ಸಂಘ ನಿ., ಮುತ್ತಗಿ, ಶ್ರೀ ಅಲೆಮಾರಿ ಜನಾಂಗದ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಬಸವನಬಾಗೇವಾಡಿ,ಶ್ರೀ ಭಾವಿ ಬಸವೇಶ್ವರ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಬಳೂತಿ ಸೇ–ರಿದಂತೆ ಇತರ ಸಹಕಾರ ಸಂಘಗಳು ಸೇರಿವೆ ಎಂದು ಬಸವನ ಬಾಗೇವಾಡಿಯ ಸಮಾಪನಾಧಿಕಾರಿ ಹಾಗೂ ಸಹಕಾರ ಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿರಿಯ ಜೀವಿಗಳ ತಿರಸ್ಕಾರ ಭಾವ ಸಲ್ಲದು



## ಇಂದು (ಅಗಷ್ಟ 21, ಶುಕ್ರವಾರ) "ಹಿರಿಯ ನಾಗರೀಕರ ದಿನ" ದ ಪ್ರಯುಕ್ತ ಈ ವಿಶೇಷ ಲೇಖನ

■ ಉದಯರಶ್ಮಿ ದಿನಪತ್ರಿಕೆ

"ಏನೆಲ್ಲ ಮರೆತರು ತಮ್ಮ, ಹಡೆದವರ ನೀ ಮರಿಬ್ಯಾಡ. ಉಪಕಾರ ತೀರಿಸಬೇಕು ಈ ಮಾತು ತಿಳಿದು ನೋಡು" ಎಂಬ ಭಜನಾ ಪದದ ಹಿಂದಿನ ಸಾರ-ಸಂದೇಶವನ್ನು ಅರಿತು ನಾವೆಲ್ಲರೂ ಹಿರಿಯ ಜೀವಿಗಳನ್ನು ಮಕ್ಕಳಂತೆ ನೋಡಬೇಕು.

ಆದರೆ ಇಂದಿನ ಆಧುನಿಕತೆ, ಕುಟುಂಬ ವಿಘಟನೆ ಮತ್ತು ಪಾಶ್ಚಾತ್ಯ ಜೀವನ ಶೈಲಿಗಳಿಂದಾಗಿ ನಮ್ಮ ಮನ, ಮನೆ, ಕುಟುಂಬ ಮತ್ತು ಸಮಾಜದಲ್ಲಿ ಬದುಕುವ ರೀತಿ-ನೀತಿ ಮತ್ತು ಜೀವನ ಕ್ರಮ ಬದಲಾಗುತ್ತಿದೆ. ಇಂದು 'ನಾವಿಬ್ಬರು ನಮಗಿಬ್ಬರು' (ಗಂಡ-ಹೆಂಡತಿ ಮತ್ತು ಮಕ್ಕಳು) ಎಂಬ ಸಂಕುಚಿತ ಭಾವ ಬರುತ್ತಿದೆ. ಆದರೆ ತಮ್ಮ ಬಹುಪಾಲು ಜೀವನವನ್ನು ಕೇವಲ ಮಕ್ಕಳ ಪಾಲನೆ-ಪೋಷಣೆ, ಕುಟುಂಬ ನಿರ್ವಹಣೆ ಮತ್ತು ಇತರರ ಶ್ರೇಯಸ್ಸಿಗಾಗಿಯೇ ಹಗಲಿರುಳು ದುಡಿದು ಇಂದು ವಯೋವೃದ್ಧರಾಗಿರುವ ಕುಟುಂಬದ ಹಿರಿಯ ಜೀವಿಗಳನ್ನು ಪ್ರೀತಿಸುವ, ಗೌರವಿಸುವ ಮತ್ತು ಉಪಚರಿಸುವ ಪರಿಯು ಕಳವಳಕಾರಿ ಸಂಗತಿ.

### ಹಿರಿಯ ಜೀವಿಗಳು ಸಂಸ್ಕೃತಿ-ಸಂಸ್ಕಾರದ ಪ್ರತಿಬಿಂಬ






ಸಂಸ್ಕೃತಿ-ಸಂಸ್ಕಾರದ ಪ್ರತೀಕ, ಸಂಪ್ರದಾಯ, ಆಚರಣೆ ಮತ್ತು ಪದ್ಧತಿಗಳ ಅನುಸರಣೆಯ ಪ್ರತಿಬಿಂಬ ಮತ್ತು ಅಮೂಲ್ಯವಾದ ಜೀವನಾನುಭವದ ರಸಪಾಕವನ್ನು ಹೊಂದಿರುವ ಹಿರಿಯ ಜೀವಿಗಳ ಆಶೀರ್ವಾದ ಮತ್ತು ಮಾರ್ಗದರ್ಶನ ಪಡೆದು ನಮ್ಮ ಜೀವನವನ್ನು ಸಾರ್ಥಕ ಮಾಡಿಕೊಳ್ಳಬೇಕು. ಮುಂದಿನ ಪೀಳಿಗೆಗೆ ಮನೆಯ ಪದ್ಧತಿ, ಆಚರಣೆ ಮತ್ತು ಸಾಮಾಜಿಕ-ಧಾರ್ಮಿಕ ವಿಧಿ ವಿಧಾನಗಳನ್ನು ಪರಿಚಯಿಸಲು ಹಾಗೂ ಉಳಿಸಿ-ಬೆಳೆಸಲು ನಮ್ಮ ಹಿರಿಯರು ನಮಗೆ ಬೇಕು. ಆದ್ದರಿಂದ ನಮಗೆ ಜನ್ಮ ನೀಡಿ, ತಪ್ಪು ಮಾಡಿದಾಗ ತಿದ್ದಿ-ತೀಡಿ, ಶಿಕ್ಷಣ ನೀಡಿ, ಉದ್ಯೋಗ ದೊರಕಲು ಸದಾಶಯ ಮಾಡಿದ ಹಾಗೂ ಸಮಾಜದಲ್ಲಿ ಉತ್ತಮ ಪ್ರಜೆಗಳನ್ನಾಗಿ ರೂಪಿಸಿದ ಅವರನ್ನು ಗೌರವ-ಪೂಜ್ಯನೀಯ ಭಾವನೆಯಿಂದ ಕಾಣುವಂತಹ ಮಾನವೀಯತೆ ಗುಣವನ್ನು ನಾವೆಲ್ಲರೂ ಬೆಳೆಸಿಕೊಳ್ಳಬೇಕು.

### ವೃದ್ಧಾಪ್ಯದಲ್ಲಿ ಹಿರಿಯ ಜೀವಿಗಳನ್ನು ಮನೆಯಿಂದ ಹೊರದೂಡಬೇಡಿ

ಮಕ್ಕಳಿಗಾಗಿ ಆಸ್ತಿಯನ್ನು ಮಾಡುವ ಬದಲು ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಉದ್ಯೋಗ ಮತ್ತು ಗ್ರಹಸ್ಥರನ್ನಾಗಿ ಮಾಡಿ ಸದಾ ಮಕ್ಕಳ ಅಭಿವೃದ್ಧಿಯನ್ನೇ ಬಯಸುವ ತಂದೆ-ತಾಯಿಯರನ್ನು ನೋಡಿಕೊಳ್ಳುವ ರೀತಿ-ನೀತಿ, ನೀಡುವ ಗೌರವ, ಆರೋಗ್ಯ ರಕ್ಷಣೆ ಇಲ್ಲದಂತಾಗಿ ಬಹಳ ಕ್ರೌರ್ಯದಿಂದ ಕಾಣುವದು ಮತ್ತು ಚಿತ್ರಹಿಂಸೆ ನೀಡಿ ಮನೆ ಹೊರಗೆ ಹಾಕುವ ದೃಶ್ಯಗಳನ್ನು ಕಂಡರೆ ಮನ ಕಲುಕುವಂತಾಗುತ್ತದೆ. ಇತ್ತೀಚಿನ ಅಂಕಿಅಂಶಗಳ ಪ್ರಕಾರ ಭಾರತದಲ್ಲಿ ಪ್ರತಿ 10 ಹಿರಿಯ ಜೀವಿಗಳಲ್ಲಿ ಸುಮಾರು 6 ಕ್ಕಿಂತಲೂ ಹೆಚ್ಚು ಜನ ವಯೋವೃದ್ಧ ತಂದೆ-ತಾಯಿಯರನ್ನು ಮನೆಯಿಂದ ಬಲವಂತವಾಗಿ ಹೊರ ಹಾಕುತ್ತಿರುವ ಘಟನೆಗಳು ನಡೆಯುತ್ತಿರುವ ತೀರ ಕಳವಳಕಾರಿ ಸಂಗತಿ. ಹೊತ್ತು-ಹೆತ್ತು ಮತ್ತು ಬದುಕಿಗೊಂದು ಆಶ್ರಯ ನೀಡಿದ ತಂದೆ-ತಾಯಿಯರನ್ನು ಹೊರೆಯಾಗಿ ನೋಡಲಾರಂಭಿಸಿದ್ದಾರೆ. ಇಂದು ವಯೋವೃದ್ಧ ಹಿರಿಯ ಜೀವಿಗಳು ಕುಟುಂಬದಲ್ಲಿ ನೀಡುವ ಹಿಂಸೆ, ಅಗೌರವ ಮತ್ತು ನೀಡುವ ಕಷ್ಟಗಳಿಂದ ನೊಂದು-ಬೆಂದು, ಮನನೊಂದು ಕೊನೆಗೆ ವೃದ್ಧಾಶ್ರಮಗಳನ್ನು ಸೇರುವ ಪರಿಸ್ಥಿತಿಯು ನಮ್ಮ ಸಂಸ್ಕೃತಿಗೆ ಒಂದು ಕಪ್ಪುಚಿಕ್ಕೆ ಬಿದ್ದಂತಾಗಿದೆ. ಮೇ 2026 ರಲ್ಲಿ ವಿದೇಶದಲ್ಲಿದ್ದ ಮಕ್ಕಳು ವಿಡಿಯೋ ಕಾನ್ಫರೆನ್ಸ್ ಮೂಲಕವೇ ಅಂತ್ಯಕ್ರಿಯೆಯಲ್ಲಿ ಭಾಗಿಯಾಗಿದ್ದು ಕಂಡುಬಂದಿರುವುದು ಕಳವಳಕಾರಿ ಸಂಗತಿ. ಮನಕಲುಕುವಂತಹ ದೃಶ್ಯ ನೋಡಿದರೆ ಮಕ್ಕಳು ಎಷ್ಟೇ ಶಿಕ್ಷಣ ಪಡೆದರೂ, ಯಾವುದೇ ಉದ್ಯೋಗ ಮಾಡಿದರೂ ಏನಂತೆ ಅವರಲ್ಲಿ ಸಂಸ್ಕಾರವಿಲ್ಲದಿದ್ದರೆ. ಈ ಅಮಾನವೀಯತೆಯ ಘಟನೆ ಕೇಳಿದ ಯಾರ ಕಣ್ಣಂಚಿನಲ್ಲಿ ದುಃಖದ ಭಾವ ಮೂಡದೇ ಇರದು.

### ಹಿರಿಯ ಜೀವಿಗಳನ್ನು ಮಕ್ಕಳಂತೆ ಕಾಣಿ

ನಮ್ಮ ಮಕ್ಕಳಂತೆ ಕಾಣುವ, ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಮತ್ತು ಪ್ರೀತಿ-ವಾತ್ಸಲ್ಯ, ತಾಯಿ ಹೃದಯದಿಂದ ಉಪಚರಿಸುವಂತೆ ಮತ್ತು ಗೌರವಯುತವಾಗಿ ಕಾಣುವಂತಹ ವಾತಾವರಣ ಪ್ರತಿ ಮನೆ, ಕುಟುಂಬ ಮತ್ತು ಕುಟುಂಬದ ಸದಸ್ಯರಲ್ಲಿ ಅರಿವು ಮೂಡಬೇಕು. ಮಕ್ಕಳೇ ತನ್ನೆಲ್ಲಾ ಸರ್ವಸ್ವವೆಂದು ತಿಳಿದು ಇಡೀ ಬದುಕನ್ನೇ ಅವರಿಗಾಗಿಯೇ ಸಮರ್ಪಿಸಿದ ಅಪ್ಪ-ಅಮ್ಮ, ಅಜ್ಜ-ಅಜ್ಜಿ ಮತ್ತು ಪೋಷಕರನ್ನು ಜೀವನದ ಸಂಧ್ಯಾಕಾಲದಲ್ಲಿ ನೋಡಿಕೊಳ್ಳುವವರು ಯಾರು? ಎಂಬ ಪ್ರಶ್ನೆಗೆ ಉತ್ತರಗಳೇ ಸಿಗುತ್ತಿಲ್ಲ. ತಂದೆ-ತಾಯಿ



ಗಳಿಸಿಟ್ಟ ಹಣ, ನಗ-ನಾಣ್ಯ, ಆಸ್ತಿ-ಪಾಸ್ತಿ ಮತ್ತು ಇತರ ಎಲ್ಲ ವಸ್ತುಗಳು ಮಕ್ಕಳಿಗೆ ಬೇಕು. ಆದರೆ ಚಿಕ್ಕಂದಿನಲ್ಲಿ ತಂದೆ-ತಾಯಿಯೇ ನೈಜ ದೇವರು ಎಂದು ಗೌರವಿಸುವ ನಮ್ಮಲ್ಲಿ ಹಿರಿಯ ಜೀವಿಗಳನ್ನು ತಿರಸ್ಕಾರ ಭಾವ ಬರಬಾರದು.

### 2026 ನೇಯ ವರ್ಷದ ಘೋಷವಾಕ್ಯ

"ದೀರ್ಘಾವಧಿಯ ಆಯಸ್ಸು; ದೀರ್ಘ ಜೀವನಕ್ಕಾಗಿ ವ್ಯವಸ್ಥೆಗಳ ಮರುಚಿಂತನೆ" ಈ ಘೋಷವಾಕ್ಯದೊಂದಿಗೆ ಆಚರಿಸಲ್ಪಡುವ ಈ ವರ್ಷದ ಹಿರಿಯ ನಾಗರೀಕರ ದಿನವು ನಮ್ಮ ಸಮಾಜವು ಹಿರಿಯರ ಅನುಭವ ಮತ್ತು ಬುದ್ಧಿವಂತಿಕೆಯನ್ನು ಮೆಚ್ಚುವುದು. ಹಿರಿಯ ಜೀವಿಗಳ ಅರೋಗ್ಯಪೂರ್ಣ ಮತ್ತು ಸುರಕ್ಷತ ಜೀವನಕ್ಕೆ ಹೆಚ್ಚಿನ ಮಹತ್ವ ನೀಡುವುದು. ಅದರಲ್ಲೂ ವಿಶೇಷವಾಗಿ ಉತ್ತಮ ಆರೋಗ್ಯ ಮತ್ತು ಸಾಮಾಜಿಕ ಭದ್ರತೆಯನ್ನು ಒದಗಿಸುವುದು ಈ ದಿನದ ಆಚ-'ರಣೆಯ ಪ್ರಮುಖ ಧ್ಯೇಯವಾಗಿದೆ.

### ಕೊನೆಯ ನುಡಿ

ಹಿರಿಯರ ಅನುಭವದ ಮಾತಿನಂತೆ, "ಹೆತ್ತವರ ಮನಸ್ಸನ್ನು ನೋಯಿಸಿದ ಗೆದ್ದವರು ಇತಿಹಾಸದಲ್ಲೇ ಇಲ್ಲ. ತಾಯಿಯನ್ನು ಪೂಜಿಸಿ ಸೋತವರು ಚರಿತ್ರೆಯಲ್ಲೇ ಇಲ್ಲ" ಎಂದು ಹೇಳಿರುವುದು ನೂರಕ್ಕೆ ನೂರರಷ್ಟು ಸತ್ಯವಾದ ಮಾತು. ಅಜ್ಜ-ಅಜ್ಜಿ, ತಂದೆ-ತಾಯಿ, ಕುಟುಂಬದ ಹಿರಿಯರು ನಮಗೆ ಆಲದ ಮರವಿದ್ದಂತೆ. ನಮ್ಮ ವಂಶದ ಕುಡಿಗಳಾದ ಮಕ್ಕಳಿಗೆ ಪ್ರೀತಿ-ಮಮತೆ, ವಾತ್ಸಲ್ಯ, ಸಂಸ್ಕೃತಿ-ಸಂಸ್ಕಾರ, ಜೀವನ-ಮೌಲ್ಯಗಳ ಆಸ್ತಿಯಿದ್ದಂತೆ. ಅದ್ದರಿಂದ ಕುಟುಂಬ ವ್ಯವಸ್ಥೆ, ಸಾಮಾಜಿಕ, ಸಾಂಸ್ಕೃತಿಕ ಮತ್ತು ಭಾವನಾತ್ಮಕತೆಗೆ ಹೆಸರುವಾಸಿಯಾದ ನಮ್ಮ ದೇಶದಲ್ಲಿ ಹಿರಿಯ ಜೀವಿಗಳನ್ನು ಮನೆಯಿಂದ ದೂರ ತಳ್ಳಿ ಅವರು ವೃದ್ಧಾಶ್ರಮ ಸೇರುವಂತಹ ದುಸ್ಥಿತಿ ಬರದಂತೆ ನೋಡಿಕೊಳ್ಳಬೇಕು. ದೇವರು ಬೇರೆಲ್ಲೂ ಇಲ್ಲ, ಅವರು ನಮ್ಮ ಹಿರಿಯ ಜೀವಿಗಳ ರೂಪದಲ್ಲೇ ಇರುತ್ತಾನೆ ಎಂಬುದನ್ನು ಅರಿತು ವಯೋ ಸಹಜವಾಗಿ ದೈಹಿಕ, ಮಾನಸಿಕ ಮತ್ತು ಭಾವನಾತ್ಮಕವಾಗಿ ಕುಂದುಹೋಗುತ್ತಿರುವ ಆ ಹಿರಿಯ ಜೀವಿಗಳನ್ನು ಸಂತೋಷದಿಂದ ಇನ್ನಷ್ಟು ಕಾಲ ಮಕ್ಕಳು-ಮೊಮ್ಮಕ್ಕಳು ಮತ್ತು ಕುಟುಂಬದ ಇತರ ಸದಸ್ಯರಾಗಿ ನೂರು ಕಾಲ ಬಾಳಿ-ಬದುಕುವಂತಾಗಬೇಕು.

ಲೇಖನ
– ಮಲ್ಲಪ್ಪ. ಸಿ. ಖೊದ್ನಾಪೂರ
(ತಿಕೋಟಾ)
ಉಪನ್ಯಾಸಕರು
ವಿಜಯಪುರ



# ಆ.23 ರಂದು ವರುಣನ ಕೃಪೆಗಾಗಿ 24 ಗಂಟೆಗಳ ಶಿವ ಸಪ್ತಾಹ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಉತ್ತಮ ಮಳೆ, ತಾಲೂಕಿನ ಸಮೃದ್ಧಿ ಹಾಗೂ ಜನ-ಜಾನುವಾರುಗಳ ಕ್ಷೇಮಕ್ಕಾಗಿ ಸಿಂದಗಿಯ ಸಾರಂಗಮಠದಲ್ಲಿ ಆ.23ರಂದು ಬೆಳಿಗ್ಗೆ 6 ರಿಂದ ಆ.24ರ ಬೆಳಿಗ್ಗೆ 6 ಗಂಟೆಯವರೆಗೆ 24 ಗಂಟೆಗಳ ಕಾಲ ನಿರಂತರ ಶಿವಭಜನೆ ಹಾಗೂ ಶಿವ ಸಪ್ತಾಹ ಆಯೋಜಿಸಲಾಗಿದೆ ಎಂದು ಪೂಜ್ಯಶ್ರೀ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡದ ಅವರು, ತಾಲೂಕಿನಾದ್ಯಂತ ಉತ್ತಮ ಮಳೆಯಾಗಿ ರೈತರು, ಜನರು ಹಾಗೂ ಜಾನುವಾರುಗಳ ಬದುಕು ಹಸನಾಗಲೆಂಬ ಸಂಕಲ್ಪದಿಂದ ಸಾಮೂಹಿಕವಾಗಿ ಶಿವನಾಮ ಸ್ಮರಣೆ ಹಾಗೂ ಪ್ರಾರ್ಥನೆ ಸಲ್ಲಿಸಲಾಗುವುದು. ಸಿಂದಗಿ, ಚಿಕ್ಕಸಿಂದಗಿ, ಬಂದಾಳ, ರಾಂಪುರ, ಬ್ಯಾಕೋಡ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದು, ಸಿಂದಗಿಯ ತಾಯಂದಿರು ಕೂಡ ಶಿವಭಜನೆಯಲ್ಲಿ ಪಾಲ್ಗೊಳ್ಳಲು ಉತ್ಸಾಹದಿಂದ ಮುಂದೆ ಬಂದಿದ್ದಾರೆ. ಶಿವ ಸಪ್ತಾಹದಲ್ಲಿ ಭಾಗವಹಿಸುವ ಭಕ್ತರು ಬಿಳಿ ಲುಂಗಿ, ವಸ್ತ್ರ ಹಾಗೂ ಟವಲ್ ತರಬೇಕು ಎಂದು ವಿನಂತಿಸಿದರು. ಸಭೆಯಲ್ಲಿ ಶ್ರೀಮಠದ ಉತ್ತರಾಧಿಕಾರಿ ಪೂಜ್ಯಶ್ರೀ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಹಾಗೂ ಸದ್ಭಕ್ತರು ಇದ್ದರು.

# ಇಂದಿನಿಂದ ರುದ್ರಮುನಿ ಶ್ರೀ ಶಿವಯೋಗ ಮೌನ ಅನುಷ್ಠಾನ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ತಾಲೂಕಿನ ಯಂಕಂಚಿ ಕುಂಟೋಜಿ ಹಿರೇಮಠ ಪೂಜ್ಯಶ್ರೀ ಅಭಿನವ ರುದ್ರಮುನಿ ಶಿವಾಚಾರ್ಯರು ಅವರ ಸಾರಥ್ಯದಲ್ಲಿ ಶ್ರಾವಣ ಮಾಸದ ನಿಮಿತ್ತ ಲೋಕ ಕಲ್ಯಾಣಾರ್ಥವಾಗಿ ಶಿವಯೋಗ ಮೌನ ಅನುಷ್ಠಾನವು ಆ.21ರಿಂದ ಸೆ.14ರವರೆಗೆ ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಮಿರಗಿ ಗ್ರಾಮದ ಶ್ರೀ ಸಂಗಮೇಶ್ವರ ದೇವಸ್ಥಾನದಲ್ಲಿ ನಡೆಯಲಿದೆ.

ಲೋಕ ಕಲ್ಯಾಣ, ಶಾಂತಿ ಹಾಗೂ ಸರ್ವರ ಒಳಿತಿಗಾಗಿ ನಡೆಯಲಿರುವ ಈ ಧಾರ್ಮಿಕ ಅನುಷ್ಠಾನದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಶಿವಾನುಗ್ರಹಕ್ಕೆ ಪಾತ್ರರಾಗಬೇಕೆಂದು ಆಯೋಜಕರು ಕೋರಿದ್ದಾರೆ.

# ಸ್ಥಗಿತಗೊಂಡ ಸಹಕಾರ ಸಂಘಗಳ ನೋಂದಣಿ ರದ್ದತಿಗೆ ಪ್ರಕಟಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ತಾಲೂಕಿನಲ್ಲಿ ತಮ್ಮ ಬೈಲಾ ಉದ್ದೇಶಗಳಂತೆ ಕಾರ್ಯನಿರ್ವಹಿಸದೇ ಸಂಪೂರ್ಣವಾಗಿ ಸ್ಥಗಿತಗೊಂಡಿರುವ ಸಹಕಾರ ಸಂಘಗಳನ್ನು ಸಮಾಪನೆಗೊಳಿಸಿ ನೋಂದಣಿ ರದ್ದುಗೊಳಿಸಲು ಕ್ರಮವಹಿಸಲಾಗುತ್ತಿದ್ದು, ಈ ಸಂಘಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಏನಾದರೂ ಆಕ್ಷೇಪಣೆ ಬಾಕಿ ಹಣದ ವ್ಯವಹಾರಗಳಿದ್ದಲ್ಲಿ 7 ದಿನಗಳೊಳಗಾಗಿ ಸೂಕ್ತ ದಾಖಲೆಗಳೊಂದಿಗೆ ಸಲ್ಲಿಸಬಹುದಾಗಿದೆ.

ಸಂಘಗಳು ತಮ್ಮ ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲದಿರುವುದು, ಆಡಳಿತ ಮಂಡಳಿ ಹಾಗೂ ಕಾರ್ಯದರ್ಶಿಗಳ ಮಾಹಿತಿ ಲಭ್ಯವಿಲ್ಲದಿರುವುದು ಮತ್ತು ಹಲವು ವರ್ಷಗಳಿಂದ ಲೆಕ್ಕ ಪರಿಶೋಧನೆ ಆಗದಿರುವುದು ಈ ಕ್ರಮಕ್ಕೆ ಕಾರಣವಾಗಿದೆ.

ನೋಂದಣಿ ರದ್ದತಿಯ ಪಟ್ಟಿಯಲ್ಲಿರುವ ಸಹಕಾರ ಸಂಘಗಳಾದ ಸಂಯುಕ್ತ ವ್ಯವಸಾಯ ಸಹಕಾರ ಸಂಘ ನಿ., ಮಮದಾಪುರ,ಇಟ್ಟಂಗಿಹಾಳ ಬಾದ್ ಮಡಿವಾಳೇಶ್ವರ ಸಹಕಾರ ಸಂಘ ನಿ., ಇಟಂಗಿಹಾಳ ಖಾದಿ ಗ್ರಾಮೋದ್ಯೋಗ ಸಹಕಾರ ಸಂಘ,ಡಾ. ಬಿ.ಆರ್. ಅಂಬೇಡ್ಕರ್ ಖಾದಿ ಮತ್ತು ಗ್ರಾಮೋದ್ಯೋಗ ಕೈಗಾ-ರಿಕಾ ಸಹಕಾರ ಸಂಘ, ವಿಜಯಪುರ, ಪಾದರಕ್ಷೆ ಖಾದಿ ಗ್ರಾಮೋದ್ಯೋಗ ಸಹಕಾರ ಸಂಘ ನಿ., ವಿಜಯಪುರ, ವಿಜಯಪುರ ತಾಲೂಕು ಖಾದಿ ಗ್ರಾಮೋದ್ಯೋಗ ಕೈಗಾ-ರಿಕಾ ಸಹಕಾರ ಸಂಘ, ಸಹಕಾರಿ ಪ್ರಾಥಮಿಕ ಶಿಕ್ಷಕರು ಹಾಗೂ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ., ವಿಜಯಪುರ, ವಿಜಯಪುರ ಗೃಹ ನಿರ್ಮಾಣ ಸಹಕಾರ ಸಂಘ ನಿ., ವಿಜಯಪುರ ಜಿಲ್ಲಾ ಪಂಚಾಯತ್ ಪರಿಷತ್ ಸದಸ್ಯರ ಗೃಹ ನಿರ್ಮಾಣ ಸಹಕಾರ ಸಂಘ ನಿ., ಗೃಹ ನಿರ್ಮಾಣ ಸಹಕಾರ ಸಂಘ ನಿ., ಮಿಂಚನಾಳ ಎಲ್.ಟಿ, ಶ್ರೀ ಬಸವೇಶ್ವರ ಪ.ಜಾ/ಪ.ಪಂ ವಿವಿಧೋದ್ದೇಶಗಳ ಸಹಕಾರಿ ಸಂಘ ನಿ., ಬಬಲೇಶ್ವರ, ಮಹಿಳಾ ವಿವಿಧೋದ್ದೇಶಗಳ ಸಹಕಾರಿ ಸಂಘ ನಿ., ಗ್ಯಾಂಗ್‌ಬಾವಡಿ, ವಿಜಯಪುರ, ಕಲ್ಲು ಖಣಿ ಕೆಲಸಗಾರರ ಸಹಕಾರಿ ಸಂಘ ನಿ., ವಿಜಯಪುರ, ವಿಜಯಪುರ ತಾಲೂಕು ಷೆಡ್ಯೂಲ್ಡ್ ಬ್ಯಾಂಕ್ ನೌಕರರ ಸಹಕಾರಿ ಸಂಘ ನಿ., ವಿಜಯಪುರ,ಶ್ರೀ ಸಾಯಿ ವಿವಿಧೋದ್ದೇಶಗಳ ಸಹಕಾರಿ ಸಂಘ ನಿ.,ವಿಜಯಪುರ, ವಿಜಾಪುರ ಸಮಾಜ ಕಲ್ಯಾಣ ಇಲಾಖಾ ನೌಕರರ ಪತ್ತಿನ ಸಹಕಾರ ಸಂಘ ನಿ.,ವಿಜಯಪುರ, ಬಸವೇಶ್ವರ ತೋಟಗಾರಿಕಾ ವ್ಯವಸಾಯ ಸಾಮಗ್ರಿಗಳ ಪೂರೈಕೆ ಹಾಗೂ ಉತ್ಪನ್ನಗಳ ಮಾರಾಟ ಸಹಕಾರ ಸಂಘ, ಕೃಷಿ ರತ್ನ ತೋಟಗಾರಿಕಾ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ತಿಕೋಟಾ, ಕುರಿ ಸಾಕಾಣಿಕೆ ಸಹಕಾರ ಸಂಘ ನಿ., ತಿಕೋಟಾ, ಸಿದ್ಧಾರ್ಥ ಗೃಹ ನಿರ್ಮಾಣ ಸಹಕಾರ ಸಂಘ ನಿ., ವಿಜಯಪುರ,ಶ್ರೀ ಶಾಂತೇಶ್ವರ ಪತ್ತಿನ ಸಹಕಾರ ಸಂಘ ನಿ., ವಿಜಯಪುರ, ವಿಶ್ವ ಸ್ನೇಹಿತ ಕ್ರೆಡಿಟ್ ಕೋ-ಆಪ್ ಸೊಸೈಟಿ ನಿ., ವಿಜಯಪುರ, ಶಿವಶರಣ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಬಾಬಾನಗರ ಜೀವನಜ್ಯೋತಿ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಕನಮಡಿ ಈ ಸಂಘಗಳಿಂದ ಯಾವುದೇ ಹಣ-ಕಾಸಿನ ಬಾಕಿ ಪಡೆಯುವುದು ಅಥವಾ ನೀಡುವುದಿದ್ದರೆ ಸಾರ್ವಜನಿಕರು ಹಾಗೂ ಸಂಬಂಧಪಟ್ಟವರು ಮಾರಾಟಾಧಿಕಾರಿ ಹಾಗೂ ಸಹಕಾರ ಅಭಿವೃದ್ಧಿ ಅಧಿಕಾ-ರಿಗಳು, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ, ವಿಜಯಪುರ ಉಪ ವಿಭಾಗ, ವಿಜಯಪುರ ಇವರನ್ನು ನೇರವಾಗಿ ಸಂಪರ್ಕಿಸುವಂತೆಯೂ, ನಿಯಮಿತ 07 ದಿನಗಳ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಬಾರದಿದ್ದಲ್ಲಿ, ಸಂಘಗಳ ನೋಂದಣಿ ರದ್ದತಿಗೆ ಮುಂದಿನ ಕಾನೂನು ಕ್ರಮ ಜರುಗಿಸಲಾಗುವುದು ಮತ್ತು ತದನಂತರ ಬರುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾ-ರಿಗಳು, ಸಹಕಾರ ಅಭಿವೃದ್ಧಿ ಅಧಿಕಾರಿಗಳು ಹಾಗು ಮಾರಾಟಾಧಿಕಾರಿಗಳು ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇಣಟಿಜಜಜಿಟಿಜಜರಿ ವಿಜಯಪುರ ಉಪ ವಿಭಾಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶರಣರ ಧರ್ಮನಿಷ್ಠೆ ಚಿಂತನೆಗಳು ಬಧುಕಿಗೆ ಪೂರಕ :ಪರಶುರಾಮ

■ ಉದಯರಶ್ಮಿ ದಿನಪತ್ರಿಕೆ




ತಾಳಿಕೋಟೆ: ಸಜ್ಜಲಗುಡ್ಡ ಶರಣಮ್ಮನವರು ಹಾಗೂ ಶ್ರೀ ನಿಜಗುಣ ಶಿವಯೋಗಿಗಳ ಇತಿಹಾಸ ಮತ್ತು ತತ್ವಚಿಂತನೆ ಎಲ್ಲರ ಬಧುಕಿಗೆ ಆದ-'ರ್ಶಪ್ರಾಯವಾಗಿವೆ' ಸಜ್ಜಲಗುಡ್ಡ ಶರಣಮ್ಮನವರ ಬದುಕು ಶರಣ ಪರಂಪರೆಯ ಮೌಲ್ಯಗಳು,ಭಕ್ತಿ,ಧರ್ಮನಿಷ್ಠೆ ಹಾಗೂ ಸಮಾಜಮುಖಿ ಚಿಂತನೆಗಳಿಗೆ ಮಾದ-ರಿಯಾಗಿದೆ ಎಂದು ಎಚ್.ಎಸ್.ಪಾಟೀಲ ಕಾಲೇಜ್ ಆಂಗ್ಲಭಾಷಾ ಉಪನ್ಯಾಸಕ ಪರಶುರಾಮ ಚೌಡಕೇರ್ ಅವರು ಹೇಳಿದರು.

ಪಟ್ಟಣದ ಶಿವಶರಣೆ ಶ್ರೀ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಶ್ರಾವಣ ಮಾಸದ ನಿಮಿತ್ಯ ಆಯೋಜಿಸಲಾದ ಸತ್ಸಂಗ ಅನುಭಾವ ಚಿಂತನೆ ಕಾರ್ಯಕ್ರಮ ಮಾತನಾಡಿದ ಅವರು, ನಿಜಗುಣ ಶಿವಯೋಗಿಗಳ ವಿಚಾರಧಾರೆ ಮುಂದಿನ ಸಂತ-ಶರಣ-ರ ಆಧ್ಯಾತ್ಮಿಕ ಚಿಂತನೆಗಳ ಮೇಲೂ ಪ್ರಭಾವ ಬೀರಿದೆ. ಸಿದ್ಧಾರೂಢ ಸ್ವಾಮಿಗಳ ಮೂಲಕ ನಿಜಗುಣ ಶಿವಯೋಗಿಗಳ ಚಿಂತನೆಗಳು ಮತ್ತಷ್ಟು ಜನಮಾನಸಕ್ಕೆ ತಲುಪಿ, ಅವರ ತತ್ವದ ವ್ಯಾಪ್ತಿ ಮುಗಿಲೆತ್ತರಕ್ಕೆ ಬೆಳೆದಿದೆ ನಿಜಗುಣ ಶಿವಯೋಗಿಗಳು ಬರೆದಿರುವ ಪ್ರವಚನ ಹಾಗೂ ತತ್ವಗ್ರಂಥಗಳಲ್ಲಿನ ವಿಚಾರಗಳನ್ನು ಜನರಿಗೆ ಸರಳವಾಗಿ ತಲುಪಿಸುವ ಅಗತ್ಯವಿದೆ ಅವರಂತೆ ಸಜ್ಜಲಗುಡ್ಡ ಶರಣಮ್ಮನವರ ಪುರಾಣ ಪ್ರವಚನವು ಕೇವಲ ಧಾರ್ಮಿಕ ಕಾರ್ಯಕ್ರಮವಾಗಿರದೆ, ಅವರ ಜೀವನಾದರ್ಶ, ಶರಣ ಸಂಸ್ಕೃತಿ ಮತ್ತು ಸಮಾಜ-ಕ್ಕೆ ನೀಡಿದ ಸಂದೇಶಗಳನ್ನು ತಿಳಿದು ಕೊಳ್ಳುವ ಅವಕಾಶವಾಗಿದೆ ಎಂದರು.

ನಾಲತವಾಡದ ಗ್ರಾಮ ಲೆಕ್ಕಾಧಿಕಾರಿ ಸಚಿನಗೌಡ ವರು ಮಾತನಾಡಿ, ಸಜ್ಜಲಗುಡ್ಡ ಶರಣಮ್ಮನವರ ಜೀವನದ ಕುರಿತು ಪುರಾಣ ಪ್ರವಚನವನ್ನು ಪರಶುರಾಮ್ ಚೌಡಕೇರ್ ಸರ್ ಅವರು ನಡೆಸಿ ಕೊಡುತ್ತಿದ್ದಾರೆ. ಪ್ರವಚನದ ಸಂದರ್ಭದಲ್ಲಿ ಶರಣಮ್ಮನವರ ಜೀವನದ ಪ್ರಮುಖ ಘಟನೆಗಳು, ಅವರ ಭಕ್ತಿ-ಶ್ರದ್ಧೆ, ಶರಣ ಪರಂಪರೆಯೊಂದಿಗಿನ ನಂಟು ಹಾಗೂ ಆದ-'ಧ್ಯಾತ್ಮಿಕ ವಿಚಾರಗಳನ್ನು ಭಕ್ತ-ರಿಗೆ ತಿಳಿಸಿಕೊಡಲಾಗುತ್ತಿದೆ. ಎಂದು ಶ್ರೀ ನಿಜಗುಣ ಶಿವ ಯೋಗಿಗಳ ಹಾಗೂ ಸಜ್ಜಲಗುಡ್ಡ ಶರಣಮ್ಮನವರ ಕುರಿತು ಕೆಲವು ವಿಚಾರಧಾರೆಯನ್ನು ಹಂಚಿಕೊಂಡರು.

ಶಿಕ್ಷಕಿ ಶ್ರೀಮತಿ ಸುಮಂಗಲಾ ಕೊಳೂರ ಮಾತನಾಡಿದರು.

ಶರಣೆ ಶಾಂತಮ್ಮ ತಾಯಿ ಕೊಳೂರ ಸಾನಿಧ್ಯ ವಹಿಸಿದ್ದರು. ಸಿಎಂ ಹಿರೇಮಠ ಹಾಗೂ ಎಸ್. ಎಂ. ಬೆನಾಳಮಠ ಅವರು ನೇತೃತ್ವ ವಹಿಸಿದ್ದರು.

ಈ ಸಮಯದಲ್ಲಿ ಪತ್ರಕರ್ತರಾದ ಅಂಬಾಜಿ ಘೋರ್ಪಡೆ, ಬಿ.ಎಸ್. ದ್ಯಾಪುರ, ಬಸಣ್ಣನವರ್ ಸರ್, ಶಶಿಧರ ಕೆಸರಭಾವಿ, ಓತಗಿರಿ, ಇಜೇರಿ, ಶ್ರೀಮತಿ ಸುನಂದಾ ನೀರಲಗಿ, ದ್ರಾಕ್ಷಾಯಿಣಿ ಹಿಪ್ಪರಗಿ, ಶಿಲ್ಪಾ ಪಾಟೀಲ್, ಶಾರದಾ ಶೆಟ್ಟಿ ಮೊದಲಾದವರು ಉಪಸ್ಥಿತ-ರಿದ್ದರು.

# ಪ್ರತಿ ವಾರ್ಡ್ನಲ್ಲಿ ಭಾರತ ಜೋಡೋ ಯುವ ಸಂಘ ರಚನೆಗೆ ಅರ್ಜಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆ ಭಾರತ ಜೋಡೋ ಯುವ ಸಂಘವನ್ನು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಥಾಪಿಸುವ ಪ್ರಕ್ರಿಯೆ ಆರಂಭಗೊಂಡಿದ್ದು, ಪ್ರತಿ ವಾರ್ಡ್ಗೆ ಒಂದರಂತೆ, ಸರಾಸರಿ 10,000 ಜನಸಂಖ್ಯೆಗೆ 1 ಸಂಘ ರಚಿಸಲು ತೀರ್ಮಾನಿಸಲಾಗಿದೆ. ಈ ಯೋಜನೆಯಡಿ ಪ್ರತಿ ಸಂಘಕ್ಕೆ 100 ಜನ ಸದಸ್ಯರನ್ನು ನೋಂದಾಯಿಸಲು ಅವಕಾಶವಿದೆ. 18 ರಿಂದ 35 ವರ್ಷ ವಯೋಮಿತಿಯ ಆಸಕ್ತ ಯುವಕ-ಯುವತಿಯರು ಸಂಘದ ಸದಸ್ಯರಾಗಲು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತ ಯುವಕ-ಯುವತಿಯರು ತಮ್ಮ ಆಧಾರ್ ಕಾರ್ಡ್ನೊಂದಿಗೆ bjys.karnataka.gov.in ಪೋರ್ಟಲ್, ಮೊಬೈಲ್ ಯ್ಯಾಪ್ ಅಥವಾ ಕರ್ನಾಟಕ ಒನ್ ನಾಗ-ರಿಕ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ನೋಂದಣಿಗೆ 10 ರೂ. ಶುಲ್ಕವಿದೆ. ಹೆಚ್ಚಿನ ಮಾಹಿತಿಗಾಗಿ ಮಹಾನಗರ ಪಾಲಿಕೆಯ ಕಚೇರಿ ಸಂಪರ್ಕಿಸಬಹುದಾಗಿದೆ ಎಂದು ಪಾಲಿಕೆಯ ಆಯುಕ್ತರ ಪ್ರಕಟಣೆ ತಿಳಿಸಿದೆ.

# ಮುದ್ದೇಬಿಹಾಳ ತಾಲೂಕನ್ನು ಬರಪೀಡಿತವೆಂದು ಘೋಷಿಸಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ಒಂದೆಡೆ ಮಳೆ ಕೊರತೆ, ಮತ್ತೊಂದೆಡೆ ಕೃಷಿ ಚಟುವಟಿ-ಕೆಗಳಿಗೆ ಎದುರಾಗಿರುವ ಸಂಕಷ್ಟದಿಂದ ತಾಲೂಕಿನ ರೈತರು ತೀವ್ರ ಆತಂಕದಲ್ಲಿದ್ದು, ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸಿ ರೈತರ ನೆರವಿಗೆ ಧಾವಿಸಬೇಕು ಎಂದು ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ವೆಂಕನಗೌಡ ಪಾಟೀಲ ಸರ್ಕಾರವನ್ನು ಒತ್ತಾಯಿಸಿದರು.

ಈ ಬಗ್ಗೆ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ತಹಸೀಲ್ದಾರರಿಗೆ ನೀಡಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಈ ಬಾರಿ ತಾಲೂಕಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದೆ ಕೃಷಿ ಚಟುವಟಿ-ಕೆಗಳಿಗೆ ಹಿನ್ನಡೆಯಾಗಿದೆ. ಮಳೆ ಕೊರತೆಯಿಂದ ರೈತರು ಬಿತ್ತನೆ, ಬೆಳೆ ನಿರ್ವಹಣೆ ಸೇರಿದಂತೆ ವಿವಿಧ ಹಂತಗಳಲ್ಲಿ ಸಂಕಷ್ಟ ಎದುರಿಸುತ್ತಿದ್ದು, ಕೃಷಿಯನ್ನೇ ಅವಲಂಬಿಸಿರುವ ಕುಟುಂಬಗಳ ಜೀವನ ನಿರ್ವಹಣೆಯ ಮೇಲೂ ಪರಿಣಾಮ ಬೀರುವ ಆತಂಕ ಎದುರಾಗಿದೆ ಈ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಸಂಕಷ್ಟದಲ್ಲಿರುವ ರೈತರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಪ್ರಕಟಿಸಬೇಕು ಎಂದು ಒತ್ತಾಯಿಸಿದರು. ರೈತರಿಗೆ ಪ್ರತಿ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು. ರೈತರ ಉಪಜೀವನಕ್ಕೆ ಪ್ರಮುಖವಾಗಿರುವ ಕೃಷಿ, ಜಾನುವಾರು ಸಾಕಾಣಿಕೆ ಹಾಗೂ ತೋಟಗಾ-ರಿಕೆ ಕ್ಷೇತ್ರಗಳಿಗೆ ತಲಾ 25 ಸಾವಿರ ನೆರವು ಒದಗಿಸಬೇಕು. ರೈತರಿಗೆ ಅಗತ್ಯವಿರುವ ಬೀಜ, ರಸಗೊಬ್ಬರ ಹಾಗೂ ಕೃಷಿ ಪರಿಕರಗಳನ್ನು ಉಚಿತವಾಗಿ ಅಥವಾ ರಿಯಾಯಿತಿ ದರದಲ್ಲಿ ಒದಗಿಸಬೇಕು. ಮಳೆ ಕೊರತೆಯಿಂದ ಹಾನಿಗೊಳಗಾದ ಬೆಳೆಗಳ ಕುರಿತು ಸೂಕ್ತ ಸಮೀಕ್ಷೆ ನಡೆಸಿ ಅರ್ಹ ರೈತರಿಗೆ ಪರಿಹಾರ ನೀಡಬೇಕು. ನೀರಾವರಿ ಹಾಗೂ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಗತ್ಯಕ್ರಮ ಕೈಗೊಳ್ಳಬೇಕು. ಬರ ಪರಿಸ್ಥಿತಿಯಿಂದ ರೈತರ ಮೇಲೆ ಉಂಟಾಗಿರುವ ಆರ್ಥಿಕ ಹೊರೆಯನ್ನು ಕಡಿಮೆ ಮಾಡಲು ವಿಶೇಷ ಪ್ಯಾಕೇಜ್ ಘೋಷಿಸಬೇಕು ಎಂದು ಮನವಿ ಪತ್ರದಲ್ಲಿ ಬೇಡಿಕೆಗಳನ್ನು ಇಡಲಾಗಿದೆ.

ಈ ವೇಳೆ ಸೋಮನಗೌಡ ಬಿರಾದಾರ, ಮಹಾಂತಗೌಡ ಕಾಶಿನಕುಂಟಿ, ಎಸ್.ಎಸ್.ಬಿರಾದಾರ, ಸಂತೋಷ ಬಿರಾದಾರ, ರವೀಂದ್ರ ಬಿರಾದಾರ, ಲೋಕನಾಥ ಲಮಾಣಿ ಇದ್ದರು.

# ಕಲಾ, ಸಾಂಸ್ಕೃತಿಕ ತಂಡಗಳ ಧನಸಹಾಯ ಅರ್ಜಿ ಸಲ್ಲಿಕೆಗೆ ಸೆ.4ವರೆಗೆ ಅವಧಿ ವಿಸ್ತರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಾಡಿನ ಕಲೆ, ಸಾಹಿತ್ಯ, ಸಂಗೀತ, ಜಾನಪದ ಹಾಗೂ ನೃತ್ಯ ಕಲಾಪ್ರಕಾರಗಳನ್ನು ಪೋಷಿಸುವ ನೋಂದಾಯಿತ ಸಂಘ–ಸಂಸ್ಥೆಗಳು ಮತ್ತು ಕಲಾವಿದರಿಗೆ ಸರ್ಕಾರ ನೀಡುವ ವಿವಿಧ ಸಹಾಯಧನಗಳ ಅರ್ಜಿ ಸಲ್ಲಿಕೆ ಅವಧಿಯನ್ನು ಸೆ.4 ರವರೆಗೆ ವಿಸ್ತರಿಸಲಾಗಿದೆ.

2026–27ನೇ ಸಾಲಿನ ಸಾಮಾನ್ಯ,ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ ಅರ್ಹ ಫಲಾನುಭವಿಗಳು ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಲು ಸೆ.4 ರವರೆಗೆ ಅರ್ಜಿ ಸಲ್ಲಿಸುವ ಕಾಲಾವಕಾಶ ಒದಗಿಸಲಾಗಿದೆ.

ನೋಂದಾಯಿತ ಕಲಾ ಸಂಘ–ಸಂಸ್ಥೆಗಳಿಗೆ ಸಾಂಸ್ಕೃತಿಕ ಚಟುವಟಿಕೆಗಳ ಧನಸಹಾಯ ಕಲಾವಿದರಿಗೆ ವಾದ್ಯ ಪರಿಕರ ಹಾಗೂ ವೇಷಭೂಷಣ ಖರೀದಿಗೆ ನೆರವು ಚಿತ್ರಕಲೆ ಮತ್ತು ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯಧನಕ್ಕಾಗಿ ಅರ್ಜಿಗಳನ್ನು ಕೇವಲ ಸೇವಾಸಿಂಧು ಪೋರ್ಟಲ್ ಮೂಲಕವೇ ಆನ್‌ಲೈನ್‌ನಲ್ಲಿ ಸಲ್ಲಿಸಬೇಕು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಚೇರಿಯಲ್ಲಿ ನೇರವಾಗಿ ಅರ್ಜಿ ಸ್ವೀಕರಿಸಲಾಗುವುದಿಲ್ಲ. ಸೆ. 4 ರ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ದೂರವಾಣಿ ಸಂಖ್ಯೆ:080–24410574, 080–22213530, 080–22241325, 9986837037ವಿಜಯಪುರ ಜಿಲ್ಲಾ ಕಚೇರಿ: 08352–251261 ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆ ತಿಳಿಸಿದೆ.

# ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಜಿಲ್ಲಾ ಪ್ರವಾಸ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರು ಜಿಲ್ಲೆಯಲ್ಲಿ ಆ. 23 ರಿಂದ 25 ರವರೆಗೆ ಪ್ರವಾಸ ಕೈಗೊಂಡಿದ್ದಾರೆ.

ಆ.22 ರ ಸಂಜೆ 6:15ಕ್ಕೆ ಬೆಂಗಳೂರಿನಿಂದ ರೈಲಿನ ಮೂಲಕ ಹೊರಟು ಆ.23ರ ಬೆಳಿಗ್ಗೆ 5:15 ಕ್ಕೆ ಆಲಮಟ್ಟಿ ತಲುಪಲಿದ್ದಾರೆ.ಆ.23 ರಂದು ಮುದ್ದೇಬಿಹಾಳ ತಾಲೂಕು ಸರ್ಕಾರಿ ಆಸ್ಪತ್ರೆಗೆ ಭೇಟಿ, ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ನಗರದ ದರ್ಬಾರ್ ಹೈಸ್ಕೂಲ್ ಮೈದಾನದಲ್ಲಿ ನಡೆಯಲಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಾತ್ರೆಯ ಬೃಹತ್ ವೇದಿಕೆ ಕಾರ್ಯಕ್ರಮ ಉದ್ಘಾಟನೆಯಲ್ಲಿ ಭಾಗವಹಿಸುವರು. ಸಂಜೆ 4.30 ಕ್ಕೆ ಸಂಕಷ್ಟದಲ್ಲಿರುವ ಮದಭಾವಿ ತಾಂಡಾ ಮಹಿಳೆಯರೊಂದಿಗೆ ಸಂವಾದ ನಡೆಸುವರು.ಆ.24 ರಂದು ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜಿನಲ್ಲಿ ಸುರಕ್ಷತೆ ಮತ್ತು ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬಳಿಕ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪೋಸ್ ಕಾಯ್ದೆ–2013ರ ತರಬೇತಿ ಕಾರ್ಯಾಗಾರ ಉದ್ಘಾಟಿಸುವರು. ನಂತರ ದರ್ಗಾ ರಸ್ತೆಯಲ್ಲಿರುವ ಕೇಂದ್ರ ಕಾರಾಗೃಹ ಹಾಗೂ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡುವರು.ನಂತರ ಇಂಡಿ ರಸ್ತೆಯಲ್ಲಿರುವ ಆಲಿಯಾಬಾದ್ ಪಾಂಗ್ರುನ್ ದೊಡ್ಡಿಯ ಕುರಿಗಾಹಿ ಮಹಿಳೆಯರನ್ನು ಭೇಟಿ ಸಮಸ್ಯೆ ಆಲಿಸುವರು. ಆ.25 ರಂದು ಬೆಳಿಗ್ಗೆ 9:30 ಕ್ಕೆ ಜಿಲ್ಲಾಸ್ಪತ್ರೆ ಆವರಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡುವರು. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಮಹಿಳಾ ದೌರ್ಜನ್ಯ ಪ್ರಕರಣಗಳು, ರಕ್ಷಣೆ ಹಾಗೂ ಕಾನೂನು ಕ್ರಮಗಳ ಕುರಿತು ಚರ್ಚೆಯಲ್ಲಿ ಭಾಗವಹಿಸುವರು. ಆ.25 ರಂದು ಸಂಜೆ 5 ಗಂಟೆಗೆ ವಿಜಯಪುರದಿಂದ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಸಹಕಾರ ಸಂಘಗಳ ನೋಂದಣಿ ರದ್ದತಿ: ಆಕ್ಷೇಪಣೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ಜಿಲ್ಲೆಯ ಇಂಡಿ ತಾಲೂಕು ವ್ಯಾಪ್ತಿಯ ಸಹಕಾರ ಸಂಘಗಳು ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ–1959 ಹಾಗೂ ನಿಯಮಗಳು–1960ರನ್ವಯ ಕಾರ್ಯನಿರ್ವಹಿಸದೇ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ, ಜಿಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು, ಅವರು ಸಮಾಪನಾಧಿಕಾರಿಗಳನ್ನು ನೇಮಿಸಿದ್ದಾರೆ. ಸಂಘಗಳಿಂದ ಸದಸ್ಯರಿಗೆ ಕೊಡತಕ್ಕ ಹಾಗೂ ಸಂಘಗಳಿಂದ ಬರತಕ್ಕ ಬಾಬುಗಳಾದ ಠೇವಣಿ, ಷೇರು ಮತ್ತಿತರ ಮೊತ್ತಗಳ ಕುರಿತು ಈ ಕಚೇರಿಯಲ್ಲಿ ಯಾವುದೇ ಮಾಹಿತಿ ಲಭ್ಯವಿರುವುದಿಲ್ಲ. ಆದ್ದರಿಂದ, ಸದರಿ ಸಂಘಗಳ ಸದಸ್ಯರಿಗೆ ಕೊಡತಕ್ಕ ಬಾಬುಗಳು ಅಥವಾ ಸಂಘಗಳಿಗೆ ಬರತಕ್ಕ ಬಾಬುಗಳು ಏನಾದರೂ ಇದ್ದಲ್ಲಿ, ಸೂಕ್ತ ದಾಖಲಾತಿಗಳೊಂದಿಗೆ 7 ದಿನಗಳೊಳಗಾಗಿ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಇಂಡಿ ಉಪ ವಿಭಾಗ ಕಚೇರಿಗೆ ಮಾಹಿತಿ ಅಥವಾ ಆಕ್ಷೇಪಣೆ ಸಲ್ಲಿಸಬಹುದಾಗಿದೆ.

ಸಂಘಗಳ ನೋಂದಣಿ ರದ್ದುಗೊಂಡ ನಂತರ ಸಲ್ಲಿಸುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ನೋಂದಣಿ ರದ್ದತಿಗೆ ಕ್ರಮ ಕೈಗೊಳ್ಳಲಾಗುತ್ತಿರುವ ಸಹಕಾರ ಸಂಘಗಳಲ್ಲಿ ಶ್ರೀ ಬಸವೇಶ್ವರ ವಿವಿಧೋದ್ದೇಶಗಳ ಸಹಕಾರ ಸಂಘ ಇಂಡಿ, ಶ್ರೀ ಮುಕ್ತಾದೇವಿ ವಿವಿಧೋದ್ದೇಶಗಳ ಸಹಕಾರ ಸಂಘ ಹಡಲಸಂಗ, ಶ್ರೀ ಸಿದ್ಧಿವಿನಾಯಕ ವಿವಿಧೋದ್ದೇಶಗಳ ಸಹಕಾರ ಸಂಘ ಗುಂದವಾನ, ಶ್ರೀ ಬಸವೇಶ್ವರ ವಿವಿಧೋದ್ದೇಶಗಳ ಸಹಕಾರ ಸಂಘ ಸಾಲೋಟಗಿ, ಶ್ರೀ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ ಹೊರ್ತಿ, ಸಿದ್ಧಾರ್ಥ ಪತ್ತಿನ ಸಹಕಾರ ಸಂಘ ಇಂಡಿ, ನವಜೀವನ ಮಹಿಳಾ ಪತ್ತಿನ ಸಹಕಾರ ಸಂಘ, ಲೋಣಿ ಬಿ.ಕೆ. ಹಾಗೂ ಗ್ರಾಹಕರ ಸಹಕಾರ ಸಂಘ ನಿ., ತೆನ್ನಿಹಳ್ಳಿ ಒಳಗೊಂಡಿವೆ ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕರು ಇಂಡಿ ಉಪ ವಿಭಾಗ ಇರವು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಪನೆಗೊಂಡ ಸಹಕಾರ ಸಂಘಗಳ ನೋಂದಣಿ ರದ್ದತಿ: ಆಕ್ಷೇಪಣೆ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಜಯಪುರ ತಾಲೂಕಿನಲ್ಲಿನ ಬೈಲಾದಲ್ಲಿನ ಉದ್ದೇಶಗಳಂತೆ ಯಾವುದೇ ಕಾರ್ಯಚಟುವಟಿಕೆಗಳನ್ನು ನಡೆಸದೆ ಸ್ಥಗಿತಗೊಂಡಿರುವ ಸಹಕಾರ ಸಂಘಗಳನ್ನು ಸಮಾಪನೆಗೊಳಿಸಲಾಗಿದ್ದು,ಮಾನ್ಯ ಸಹಕಾರ ಸಂಘಗಳ ಉಪ ನಿಬಂಧಕರ ಆದೇಶದನ್ವಯ ಸಮಾಪನಾಧಿಕಾರಿಯನ್ನು ನೇಮಕ ಮಾಡಲಾಗಿದೆ.

ಈ ಸಂಘಗಳು ತಮ್ಮ ನೋಂದಾಯಿತ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಸಂಘಗಳ ಆಡಳಿತ ಮಂಡಳಿ ಸದಸ್ಯರು ಹಾಗೂ ಕಾರ್ಯದರ್ಶಿಗಳ ಕುರಿತು ಯಾವುದೇ ಮಾಹಿತಿ ಲಭ್ಯವಿಲ್ಲ. ಹಲವು ವರ್ಷಗಳಿಂದ ಸಂಘಗಳ ವ್ಯವಹಾರಗಳ ಲೆಕ್ಕಪರಿಶೋಧನೆಯೂ ನಡೆದಿರುವುದಿಲ್ಲ. ಸಂಘಗಳ ಕೊಡತಕ್ಕ ಹಾಗೂ ಬರತಕ್ಕ ಬಾಬ್ತುಗಳ ಕುರಿತು ಯಾವುದೇ ಮಾಹಿತಿ ಲಭ್ಯವಿಲ್ಲದ ಹಿನ್ನೆಲೆಯಲ್ಲಿ, ಯಾವುದೇ ವ್ಯಕ್ತಿಗಳಿಗೆ ಕೊಡತಕ್ಕ ಅಥವಾ ಯಾವುದೇ ವ್ಯಕ್ತಿಗಳಿಂದ ಬರತಕ್ಕ ಬಾಬ್ತುಗಳು, ಹಕ್ಕುಗಳು ಬಾಧ್ಯತೆಗಳೇನಾದರೂ ಇದ್ದಲ್ಲಿ, ಸಂಬಂಧಿಸಿದ ಸೂಕ್ತ ದಾಖಲೆಗಳೊಂದಿಗೆ ಪತ್ರಿಕಾ ಪ್ರಕಟಣೆ ಹೊರಡಿಸಿದ 7 ದಿನಗಳೊಳಗಾಗಿ ಸಮಾಪನಾಧಿಕಾರಿಗಳು,ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ, ವಿಜಯಪುರ ಉಪ ವಿಭಾಗ, ಇವರನ್ನು ಸಂಪರ್ಕಿಸಿ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಕೋರಲಾಗಿದೆ. ನಿಗದಿತ ಅವಧಿಯೊಳಗಾಗಿ ಯಾವುದೇ ಆಕ್ಷೇಪಣೆಗಳು ಸಲ್ಲಿಕೆಯಾಗದಿದ್ದಲ್ಲಿ, ಸದರಿ ಸಂಘಗಳ ನೋಂದಣಿ ರದ್ದತಿಗೆ ಯಾವುದೇ ಆಕ್ಷೇಪಣೆ ಇಲ್ಲವೆಂದು ಭಾವಿಸಿ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಶ್ರೀ ಬಸವೇಶ್ವರ ಪತ್ತಿನ ಸಹಕಾರ ಸಂಘ ವಿಜಯಪುರ, ಧರಿದೇವರ ಪತ್ತಿನ ಸಹಕಾರ ಸಂಘ ಕನಮಡಿ, ಅಲ್‌ಹುದಾ ಮುಸ್ಲಿಂ ಮಹಿಳಾ ಮೈನಾರಿಟಿ ಕೋ–ಆಪ್ ಕ್ರೆಡಿಟ್ ಸೊಸೈಟಿ, ವಿಜಯಪುರ, ಶ್ರೀ ವೀರಭದ್ರೇಶ್ವರ ಕೈಮಗ್ಗ ನೇಕಾರ ಮಾರಾಟ ಸಹಕಾರ ಸಂಘ, ಕಣಮುಚನಾಳ ಹಾಗೂ ನಂದಿ ಪತ್ತಿನ ಸಹಕಾರ ಸಂಘ,ಕಂಬಾಗಿ ಒಳಗೊಂಡಿವೆ ಎಂದು ಸಮಾಪನಾಧಿಕಾರಿಗಳು ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿ ವಿಜಯಪುರ ಉಪ ವಿಭಾಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಇಂಡಿ ತಾಲೂಕಿನ ಹೊರ್ತಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಪದವಿ ಪೂರ್ವ ಕಾಲೇಜನ್ನಾಗಿ ಉನ್ನತೀಕರಿಸಲಾಗಿದೆ. ಈ ಹಿನ್ನೆಲೆಯಲ್ಲಿ, 2026–27ನೇ ಶೈಕ್ಷಣಿಕ ಸಾಲಿಗೆ ವಿವಿಧ ವಿಷಯಗಳ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕನ್ನಡ,ಆಂಗ್ಲ,ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ, ಜೀವಶಾಸ್ತ್ರ ಹಾಗೂ ಗಣಕಯಂತ್ರ ವಿಷಯಗಳಲ್ಲಿ ತಲಾ ಒಂದು ಅತಿಥಿ ಉಪನ್ಯಾಸಕ ಹುದ್ದೆ ಖಾಲಿ ಇದ್ದು, ಭಾಷಾ ವಿಷಯಗಳಿಗೆ ಎಂ.ಎ, ಬಿ.ಎಡ್', ವಿಜ್ಞಾನ ವಿಷಯಗಳಿಗೆ 'ಎಂ.ಎಸ್ಸಿ, ಬಿ.ಎಡ್' ಹಾಗೂ ಗಣಕಯಂತ್ರ ವಿಷಯಕ್ಕೆ 'ಎಂ.ಸಿ.ಎ / ಎಂ.ಟೆಕ್ / ಎಂ.ಎಸ್ಸಿ' ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಆಸಕ್ತರು ಆಗಸ್ಟ್.24ರೊಳಗಾಗಿ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು, ಹೊರ್ತಿ, ಇಲ್ಲಿಗೆ ನೇರವಾಗಿ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9535186208 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಉಮೇಶ ಕಾಂಬ್ಳೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಂದು ಛಾಯಾಚಿತ್ರ ಜಗತ್ತಿನ ಇತಿಹಾಸ ನೆನಪಿಸುತ್ತದೆ :ಸಾಲಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘ ದಿಂದ ಆ.ರಂದು ನಗರದ ಸರಕಾರಿ ಆರ್ಟ್ ಗ್ಯಾಲರಿಯಲ್ಲಿ ಆಯೋಜಿಸಲಾದ "ವಿಶ್ವ ಛಾಯಾಗ್ರಹಣ ದಿನಾಚರಣೆ"ಯ ಅಂಗವಾಗಿ ಹಿರಿಯ ಛಾಯಾಗ್ರಾಹಕರಿಗೆ ಸನ್ಮಾನ, ಛಾಯಾಗ್ರಾಹಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮತ್ತು ಛಾಯಾಚಿತ್ರಗಳ ಪ್ರದರ್ಶನ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಹಿರಿಯ ಕಲಾವಿದ ವಿದ್ಯಾಧರ ಸಾಲಿ ಮಾತನಾಡಿ, ಒಂದು ಛಾಯಾಚಿತ್ರ ಜಗತ್ತಿನ ಇತಿಹಾಸ ನೆನಪಿಸುತ್ತದೆ ಅದರ ಜೊತೆಯಲ್ಲಿ ದಾಖಲಾತಿಕೂಡ ಆಗುತ್ತದೆ ಇವತ್ತಿನ ಆಧುನಿಕ ಜಗತ್ತಿನಲ್ಲಿ ಛಾಯಾಗ್ರಹಣ ಮಾಡಿ ಜೀವನ ನಡೆಸುವುದು ಕಷ್ಟದಾಯಕದ ಕೆಲಸ ಅದರಲ್ಲೂ ಕ್ಯಾಮರಾಗಳ ಬೆಲೆ ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಒಬ್ಬರೊಂದಿಗೆ ಒಬ್ಬರು ಕಾಂಪಿಟೇಷನ್ ನಡೆಸುವ ಪರಿಸ್ಥಿತಿ ಇದೆ. ಆದರೆ ಹಿಂದಿನ ದಿನಗಳಲ್ಲಿ ಕಪ್ಪು ಬಿಳುಪು ಚಿತ್ರಗಳಿಗೆ ಇರುವ ಇತಿಹಾಸ ಇವತ್ತಿನ ಛಾಯಾಗ್ರಹಣಕ್ಕೆ ಇಲ್ಲ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಇನ್ನೊಬ್ಬ ಮುಖ್ಯಅತಿಥಿ ಹಿರಿಯ ಛಾಯಾಗ್ರಾಹಕ ಮತ್ತು ಕಲಾವಿದ ಬಿ.ಎಸ್. ಪಾಟೀಲ ಅವರು ಮಾತನಾಡುತ್ತ, ಡಿಜಿಟಲ್ ಕಾಲ ಬರುವುದಕ್ಕೂ ಮೊದಲು ಛಾಯಾಗ್ರಹಣ ಮಾಡುವುದು ಅಷ್ಟು ಸುಲಭದ ಮಾತಾಗಿರಲಿಲ್ಲ ಅದರಲ್ಲೂ ಕಲಾತ್ಮಕ ಹಾಗೂ ವನ್ಯಜಿವಿ ಛಾಯಾಗ್ರಹಣ ಮಾಡುವುದು ಅಷ್ಟು ಸುಲಭದ ಮಾತಾಗಿರಲಿಲ್ಲ . ಆದರೆ ಇಂದಿನ ಡಿಜಿಟಲ್ ಯುಗದಲ್ಲಿ ಕ್ಷಣಾರ್ಧದಲ್ಲೇ ನಮಗೆ ಉತ್ತಮ ಚಿತ್ರ ಬಂದು ಸಾಮಾಜಿಕ ಜಾಲತಾಣದಲ್ಲಿ ಮೂಡಿಬಂದು ಕೆಲವೇ ಕ್ಷಣದಲ್ಲಿ ಅದು ಜಗತ್ಪ್ರಖ್ಯಾತಿ ಪಡೆಯುವಲ್ಲಿ ಯಶಸ್ವಿಯಾಗುತ್ತದೆ ಎಂದರು.

ಹಿರಿಯ ಕಲಾವಿದರಾದ ಎಂ.ಕೆ. ಪತ್ತಾರ. ಪ್ರವಾಸೋಧ್ಯಮ ಇಲಾಖೆಯ ಅನಿಲಕುಮಾರ ಬನಜಿಗೇರ ವೇದಿಕೆ ಮೇಲಿದ್ದರು.

ಜಿಲ್ಲಾ ಸಂಘದ ಅಧ್ಯಕ್ಷ ರಮೇಶ ಚವ್ಹಾಣ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಛಾಯಾರತ್ನ ಪ್ರಶಸ್ತಿಗೆ ಭಾಜನರಾದ ವಿಜಯಪುರದ ಗುರುರಾಜ ಔರಸಂಗ, ಉದಯಕುಮಾರ ಕುಲಕರ್ಣಿ, ಮಾಣಿಕಪ್ರಭು ಶಟಗಾರ, ಮಲ್ಲಿಕಾರ್ಜುನ ಗುಲಗಂಜಿ, ನಿಂಬರಗಿಯ ದೇವಾನಂದ ಸಿಂಗೆ, ತಿಕೋಟಾದ ದಯಾನಂದ ಪರಮಾಜ, ನಿಡಗುಂದಿಯ ಮಾನಪ್ಪ ಬಡಿಗೇರ, ಉಕ್ಕಲಿಯ ಅನಿಲ ಕಲ್ಯಾಣಿ, ಮಸುತಿಯ ಲಕ್ಷ್ಮಣ ಹೊಸೂರ ಇವರಿಗೆ ಪ್ರಶಸ್ತಿನೀಡಿ ಗೌರವಿಸಲಾಯಿತು.

ಜಿಲ್ಲೆಯ ಛಾಯಾಗ್ರಾಹಕರ ಮಕ್ಕಳು ಎಸ್.ಎಸ್. ಎಲ್.ಸಿ. ಮತ್ತು ಪಿ.ಯು.ಸಿ.ಯಲ್ಲಿ ಉತ್ತಮ ಅಂಕಗಳೊದಿಗೆ ಉತ್ತೀರ್ಣರಾದ ಭವಾನಿ ನೇಜ, ವಿಜೇತಾ ಮಹಾಂತಮಠ, ಶಿವಾನಿ ನೇಜ, ಐಶ್ವರ್ಯ ಮಠಪತಿ ಕುಮಾರ ಅಭಿಲಾಷ ನಾವಿ, ಸಂಪತ್ತ ಬಡಿಗೇರ, ಸುದರ್ಶನ ಉಪಾಧ್ಯ, ಸಚೀನ ಬಡಿಗೇರ, ಅಭೀಷೇಕ ನಾವಿ ಇವರನ್ನು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಛಾಯಾಗ್ರಾಹಕರಾದ ರಮೇಶ ಚವ್ಹಾಣ, ಸತೀಶ ಕಲಾಲ, ಶಶಿಕುಮಾರ ಕುಂಬಾರ, ಮಲ್ಲಿಕಾರ್ಜುನ ಪಾರ್ವತಿ, ಇವರ ಛಾಯಾಚಿತ್ರಗಳು ಕಲಾಸಕ್ತರ ಮನ ತಣಿಸಿದವು.

ಕಾರ್ಯಕ್ರಮದಲ್ಲಿ ಛಾಯಾಗ್ರಾಹಕರಾದ ಸಂಜೀವ ಜಮಾದಾರ, ಜಗಮೋಹನ ಉಪಾಧ್ಯೆ, ಶಿವರಾಜ ಕುಂಟೋಜಿ, ಶಿವಾನಂದ ಜಿಗಜಿವಣಗಿ, ಸಂಜಯ ರೇವೆ, ಆನಂದ ಮಹಾಂತಮಠ, ಸಂಗಮೇಶ ಬದಾಮಿ, ಮಹೇಶ ಕುಂಬಾರ, ಮಹಾಂತೇಶ ಪಾಟೀಲ್ ಪಿ.ಎಸ್.ಕಡೇಮನಿ, ಮಹೇಶ ಪಾಟೀಲ, ಸಂಗಯ್ಯ ಮಠಪತಿ, ಪಿಂಟು ರಜಪೂತ, ಸುರೇಶ ಗಲ್ಫಿ, ಮುರಾರಿ ಕರ್ವಾ, ಆರ್ಯನ್ ಹಿರೇದಸಾಯಿಸಾಯಿ, ವೀರೇಶ ಅಡಕಿ, ಸುಭಾಸ ಪವಾರ, ಪ್ರಶಂತ ಪಟ್ಟಣಶೆಟ್ಟಿ, ಸುರೇಶ ರಾಠೋಡ, ಪವನ ಅಂಗಡಿ, ಸತೀಶ ಕಲಾಲ, ಶಶಿಕುಮಾರ ಕುಂಬಾರ, ಮಲ್ಲಿಕಾರ್ಜುನ ಪಾರ್ವತಿ, ಮೌನೇಶ ಬಡಿಗೇರ, ಗೌಡಪ್ಪಗೌಡ ಬಿರಾದಾರ, ಸಂತೋಷ ಹಂಜಗಿ, ಆಕಾಶ ಧೋರಕರ, ನಾಗಯ್ಯ ಗಣಾಚಾರಿ, ಶೇಖರ ಹರಕಂಗಿ, ಸುನೀಲ ಬಿರಾದಾರ, ಸಿದ್ದು ಹೊದ್ಲೂರ, ಶಕೀಲ, ಚಂದ್ರಕಾಂತ ವಡ್ಡರ, ಬಸವರಾಜ ವಾಲಿಕಾರ ಸಹಿತ 200ಕ್ಕೂ ಹೆಚ್ಚು ಛಾಯಾಗ್ರಾಹಕರು, ಜಿಲ್ಲೆಯ ವಿವಿಧ ತಾಲೂಕಿನ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ವಿಜಯಪುರ ಜಿಲ್ಲೆ ಬರಪೀಡಿತ ಪ್ರದೇಶವೆಂದು ಘೋಷಿಸಿ; ರೈತರ ಖಾತೆಗೆ ನೇರ ಪರಿಹಾರ ಜಮೆ ಮಾಡಲು ಆಗ್ರಹ

# ರೈತನ ಬೆಳೆ ಮಣ್ಣುಪಾಲು ಕಣ್ಣೀರು ಮಾತ್ರ ರೈತನ ಪಾಲು :ಕೋನಳ್ಳಿ

■ ಉದಯರಶ್ಮಿ ದಿನಪತ್ರಿಕೆ



ಚಡಚಣ: ಶ್ರೀಮಂತರಿಂದ ಸಾಲ ಪಡೆದು ಬಿತ್ತನೆ ಬೀಜ ಖರೀದಿಸಿ, ಹೊಲದಲ್ಲಿ ಬೆವರು ಸುರಿಸಿ ಬೆಳೆ ಬೆಳೆಸಿ, ಬಂದ ಫಸಲಿನಿಂದ ಸಾಲ ತೀರಿಸಿ, ಕುಟುಂಬದ ಜೀವನ ಸುಗಮವಾಗಿರಲಿ ಎಂಬ ಕನಸು ಕಂಡಿದ್ದ ರೈತನ ಆಶಯ ಇಂದು ಮಣ್ಣುಪಾಲಾಗಿದೆ ಎಂದು ಇಂಡಿ ತಾಲೂಕು ಬಿಜೆಪಿ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ರವಿಕಾಂತ ಕೋನಳ್ಳಿ (ಕುಡಗಿ) ಆಕ್ರೋಶ ವ್ಯಕ್ತಪಡಿಸಿದರು.

ಝಳಕಿ, ಬಳ್ಳೊಳ್ಳಿ, ಗುಂದಾವನ ಹಾಗೂ ಕುಡಗಿ ಗ್ರಾಮದ ಸುತ್ತಮುತ್ತಲಿನ ರೈತರ ಜಮೀನುಗಳಿಗೆ ಬಿಜೆಪಿ ಕಾರ್ಯಕರ್ತರೊಂದಿಗೆ ಭೇಟಿ ನೀಡಿದ ಅವರು, ಬೆಳೆಗಳ ಸ್ಥಿತಿಗತಿಗಳನ್ನು ಪರಿಶೀಲಿಸಿ ರೈತರೊಂದಿಗೆ ಚರ್ಚೆ ನಡೆಸಿದರು.

ಮಳೆ ಕೊರತೆಯಿಂದ ಬೆಳೆಗಳು ಒಣಗುತ್ತಿರುವುದು, ಬಿತ್ತನೆಗೆ ಮಾಡಿದ ಖರ್ಚು ಕೂಡ ಮರಳುವ ಪರಿಸ್ಥಿತಿ ಇಲ್ಲದಿರುವುದು ಹಾಗೂ ಸಾಲದ ಹೊರೆ ಹೆಚ್ಚುತ್ತಿರುವ ಕುರಿತು ರೈತರಿಂದ ಮಾಹಿತಿ ಪಡೆದು ಅವರ ಅಳಲನ್ನು ಆಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರವಿಕಾಂತ ಕೋನಳ್ಳಿ, "ರೈತನ ಬೆಳೆ ಮಣ್ಣುಪಾಲಾಗಿದೆ, ಮಳೆ ನೀರು ದೇವರ ಪಾಲಾಗಿದೆ, ಅನುದಾನ ಸರ್ಕಾರದ ಪಾಲಾಗಿದೆ; ಕಣ್ಣೀರು ಮಾತ್ರ ರೈತನ ಪಾಲಾಗಿದೆ" ಎಂದು ವ್ಯಥೆ ವ್ಯಕ್ತಪಡಿಸಿದರು. ಮಳೆ ಕೈಕೊಟ್ಟಿರುವ ಪರಿಣಾಮ ವಿಜಯಪುರ ಜಿಲ್ಲೆಯ ಹಲವು ಭಾಗಗಳಲ್ಲಿ ಕೃಷಿ ಚಟುವಟಿಕೆಗಳು ತೀವ್ರ ಸಂಕಷ್ಟಕ್ಕೆ ಸಿಲುಕಿವೆ. ಸರ್ಕಾರ ಕೇವಲ ಜಿಪಿಎಸ್ ಮೂಲಕ ಬೆಳೆ ಪರಿಶೀಲನೆ ಹಾಗೂ ಅಧಿಕಾರಿಗಳಿಂದ ಸ್ಥಳ ಪರಿಶೀಲನೆ ನಡೆಸುವುದಕ್ಕೆ ಸೀಮಿತವಾಗದೆ, ವಾಸ್ತವ ಪರಿಸ್ಥಿತಿಯನ್ನು ಅರಿತು ಕೂಡಲೇ ವಿಜಯಪುರ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು ಎಂದು ಅವರು ಒತ್ತಾಯಿಸಿದರು. ಸರ್ಕಾರ ತಕ್ಷಣವೇ ಬರ ಪರಿಸ್ಥಿತಿಯ ಕುರಿತು ಸಮಗ್ರ ಸಮೀಕ್ಷೆ ನಡೆಸಿ, ಬೆಳೆ ನಷ್ಟಕ್ಕೆ ಅನುಗುಣವಾಗಿ ರೈತರಿಗೆ ಪರಿಹಾರ ಒದಗಿಸಬೇಕು. ರೈತರ ಸಾಲದ ಹೊರೆ, ಬಿತ್ತನೆ ವೆಚ್ಚ ಹಾಗೂ ಮುಂದಿನ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ನೆರವಿನ ಬಗ್ಗೆಯೂ ಸರ್ಕಾರ ವಿಶೇಷ ಗಮನ ಹರಿಸಬೇಕು ಎಂದು ಅವರು ಆಗ್ರಹಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ವಿವಿಧ ಗ್ರಾಮಗಳ ರೈತರು ಉಪಸ್ಥಿತರಿದ್ದರು.

# ರಂಗಭೂಮಿ ಕಲಾವಿದ ರಾಜಕುಮಾರ್ ಗೆ ನಾಟಕ ಅಕಾಡೆಮಿ ಪ್ರಶಸ್ತಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕಳೆದ ನಾಲ್ಕು ದಶಕಗಳಿಂದ ರಂಗಭೂಮಿ, ಕಿರುತೆರೆ ಹಾಗೂ ಹಿರಿತೆರೆಯ ಕಲಾ ಕ್ಷೇತ್ರದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ರಂಗಭೂಮಿ ಕಲಾವಿದ ರಾಜಕುಮಾರ್ ಅವರು ಪ್ರಸಕ್ತ ಸಾಲಿನ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿಗೆ ಭಾಜನರಾಗಿದ್ದಾರೆ.

1987ರಲ್ಲಿ ಶಾಲಾ ದಿನಗಳಲ್ಲಿಯೇ ನಾಟಕದ ಮೂಲಕ ರಂಗಭೂಮಿಗೆ ಪ್ರವೇಶಿಸಿದ ರಾಜಕುಮಾರ್ ಅವರು ನಂತರ ಕಾಲೇಜು ದಿನಗಳಲ್ಲಿ ಕಿರು ನಾಟಕಗಳಲ್ಲಿ ಅಭಿನಯ ಹಾಗೂ ನಿರ್ದೇಶನದ ಮೂಲಕ ತಮ್ಮ ಕಲಾ ಪಯಣವನ್ನು ಮುಂದುವರಿಸಿದರು.

1991ರಲ್ಲಿ ಭಾರತ ಯಾತ್ರಾ ಕೇಂದ್ರದ ಕಾಲೇಜು ರಂಗ ತರಬೇತಿ ಶಿಬಿರದಲ್ಲಿ ಪಾಲ್ಗೊಂಡು, ಪ್ರಯೋಗ ರಂಗತಂಡದಲ್ಲಿ ಶ್ರೀನಿವಾಸ್ ಪ್ರಭು ಅವರ ನಿರ್ದೇಶನದ 'ರಾಜಭೇಟೆ' ನಾಟಕದಲ್ಲಿ ಅಭಿನಯಿಸಿದ್ದು,

1992 ರಿಂದ 2014ರವರೆಗೆ ಭಾರತ ಯಾತ್ರಾ ಕೇಂದ್ರ ಆಯೋಜಿಸಿದ ಅಂತರ ಕಾಲೇಜು ರಂಗ ಸ್ಪರ್ಧೆಗಳಲ್ಲಿ ನೇಪಥ್ಯ ನಿರ್ವಹಣೆ ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿರುವ ಅವರು, ಮೈಸೂರು ಲಲಿತ ಕಲಾ ಸಂಘ ಆಯೋಜಿಸಿದ ನಾಟಕ ಸ್ಪರ್ಧೆಯಲ್ಲಿ 'ರಾಕ್ಷಸ' ನಾಟಕದ ನಿರ್ದೇಶನ ಸಹ ಮಾಡಿದ್ದಾರೆ. ಉಡುಪಿಯ 'ನಮ್ಮ ತುಳುವ' ಕಲಾಸಂಘ ತಂಡದೊಂದಿಗೆ 'ಶ್ರೀರಂಗ ರಚನೆಯ ನೀ ಮಾಯೆಯೋ, ಒಳಗೋ,, ನೀನೊಳಗೋ ಮಾಯೆಯೋ' ನಾಟಕದ ನಿರ್ದೇಶನ ಹಾಗೂ ಸಂಗೀತ ಸಂಯೋಜನೆ ಮಾಡಿದ್ದಾರೆ.

ರಾಜಕುಮಾರ್ ಅವರ ನಾಲ್ಕು ದಶಕಗಳ ರಂಗಸೇವೆಯಲ್ಲಿ ರಾಜ್ಯ ಹಾಗೂ ದೇಶದ ಪ್ರಮುಖ ನಗರಗಳಲ್ಲಿ 2,000ಕ್ಕೂ ಹೆಚ್ಚು ಪ್ರದರ್ಶನಗಳಲ್ಲಿ ಅಭಿನಯ, ನಿರ್ದೇಶನ, ನೇಪಥ್ಯ, ಬೆಳಕು ಹಾಗೂ ಪ್ರಸಾಧನ ಸೇರಿದಂತೆ ವಿವಿಧ ವಿಭಾಗಗಳಲ್ಲಿ ಕಾರ್ಯನಿರ್ವಹಿಸಿರುವ ಅನುಭವ ಇವರದ್ದಾಗಿದೆ. ರಾಷ್ಟ್ರೀಯ ನಾಟಕೋತ್ಸವಗಳು ಹಾಗೂ ದಕ್ಷಿಣ ವಲಯ ನಾಟಕೋತ್ಸವಗಳಲ್ಲಿಯೂ ಅವರು ಭಾಗವಹಿಸಿದ್ದಾರೆ.

ತಂಜಾವೂರಿನಲ್ಲಿ ನಡೆದ ಕಾವೇರಿ ಕಲೈವಿಳಾ ಕಾರ್ಯಕ್ರಮದಲ್ಲಿ ತಮಿಳು ನಾಟಕ 'ಅರಕ್ಕನ್'ನಲ್ಲಿ ಅಭಿನಯಿಸಿ, ಪ್ರಸಾಧನಕ್ಕಾಗಿ ಅತ್ಯುತ್ತಮ ನಟ ಹಾಗೂ ನಿರ್ದೇಶನ ಪ್ರಶಸ್ತಿಯನ್ನು ಪಡೆದಿರುವುದೂ ಅವರ ಕಲಾ ಸೇವೆಯ ಪ್ರಮುಖ ಸಾಧನೆಗಳಲ್ಲಿ ಒಂದಾಗಿದೆ.

ಇದಲ್ಲದೆ ಹಂಪಿ ಉತ್ಸವ, ಬನವಾಸಿ ಉತ್ಸವ, ಆನೆಗುಂದಿ ಉತ್ಸವ, ರನ್ನ ಉತ್ಸವ ಹಾಗೂ ಮೈಸೂರು ದಸರಾ ಸೇರಿದಂತೆ ವಿವಿಧ ಸಾಂಸ್ಕೃತಿಕ ಉತ್ಸವಗಳಲ್ಲಿ ಅವರು ವೇದಿಕೆ ನಿರ್ವಹಣೆ, ನಿರೂಪಣೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ನಿರ್ವಹಣೆಯಲ್ಲಿ ಸೇವೆ ಸಲ್ಲಿಸಿದ್ದಾರೆ.

ಬೆಳಗಾವಿಯಲ್ಲಿನಡೆದವಿಶ್ವಕನ್ನಡಸಮ್ಮೇಳನದಲ್ಲಿಯೂ ನಿರ್ವಹಣಾ ಕಾರ್ಯದಲ್ಲಿ ಭಾಗವಹಿಸಿದ್ದಾರೆ. ವಿವಿಧ ಪ್ರಸಿದ್ಧ ನಾಟಕ ನಿರ್ದೇಶಕರೊಂದಿಗೆ ಸಹಕರಿಸಿ ಹಲವಾರು ನಾಟಕಗಳಲ್ಲಿ ಅಭಿನಯಿಸಿರುವ ರಾಜಕುಮಾರ್ ಅವರು 'ಕರ್ಣಭಾರ', 'ಪರಿಹಾರ', 'ವಧೂಟಿ', 'ಸ್ಮಶಾನ ಕುರುಕ್ಷೇತ್ರ', 'ಸುಭದ್ರಾ ಕಲ್ಯಾಣ', 'ಅನಭಿಜ್ಞ ಶಾಕುಂತಲ', 'ಅರಕ್ಕನ್' ಸೇರಿದಂತೆ ಅನೇಕ ನಾಟಕಗಳಲ್ಲಿ ಅಭಿನಯ ಹಾಗೂ ನಿರ್ದೇಶನದ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ.

ರಂಗಭೂಮಿಗೆ ಸಲ್ಲಿಸಿರುವ ದೀರ್ಘಕಾಲದ ಸೇವೆ, ಅಭಿನಯ, ನಿರ್ದೇಶನ, ನೇಪಥ್ಯ ಹಾಗೂ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ನೀಡಿರುವ ಕೊಡುಗೆಯನ್ನು ಪರಿಗಣಿಸಿ ರಾಜಕುಮಾರ್ ಅವರಿಗೆ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಸಂದಿರುವುದು ಇವರ ಕಾರ್ಯಕ್ಷಮತೆಗೆ ಕೈಗನ್ನಡಿಯಾಗಿದೆ.

ರಾಷ್ಟ್ರದ ರಾಜಧಾನಿ ನವದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವದ ಸ್ತಬ್ಧಚಿತ್ರ ಪೆರೆಡ್ ನಲ್ಲಿ ಕರ್ನಾಟಕ ರಾಜ್ಯದಿಂದ ಭಾಗವಹಿಸುವ ಸ್ತಬ್ದ ಚಿತ್ರದ ನಿರ್ಮಾಣದಲ್ಲಿ ಪ್ರತಿರೂಪಿ ಸಂಸ್ಥೆಯ ಅಂತಾರಾಷ್ಟ್ರೀಯ ಕಲಾ ನಿರ್ದೇಶಕರಾದ ಶಶಿಧರ ಅಡಪ ಅವರ ತಂಡದಿಂದ ಕಳೆದ 12 ಸ್ತಬ್ಧಚಿತ್ರಗಳ ನಿರ್ಮಾಣದಲ್ಲಿ ಡಿಸೆಂಬರ್ ಹಾಗೂ ಜನವರಿ ಮಾಹೆಯ ನವದೆಹಲಿಯ ಕೊರೆಯುವ ಚಳಿಯಲ್ಲೂ ಕಾರ್ಯನಿರ್ವಹಿಸಿದ ಅಗಾಧ ಅನುಭವ ಹೊಂದಿದ್ದಾರೆ.

# ಡಿ ದೇವರಾಜ ಅರಸು ಸಾಮಾಜಿಕ ಪರಿವರ್ತನೆಯ ಹರಿಕಾರ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಸಾಮಾಜಿಕ ಪರಿವರ್ತನೆಯ ಹರಿಕಾರ ಡಿ.ದೇವರಾಜ ಅರಸುರವರ ದೂರದೃಷ್ಟಿತ್ವ, ಬದ್ಧತೆ ರಾಜ್ಯದ ಅಭಿವೃದ್ಧಿಗೆ ದಾರಿದೀಪವಾಗಿದ್ದು, ಅವರ ಕೊಡುಗೆಗಳು ಸದಾ ಪ್ರೇರಣಾದಯಕವಾಗಿವೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಗುರುವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ಡಿ.ದೇವರಾಜ ಅರಸು ಅವರ 111ನೇ ಜಯಂತಿ ಆಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ನಾಡಿನ ಸಾಮಾಜಿಕ, ಶಿಕ್ಷಣ, ಆರ್ಥಿಕ ಕ್ಷೇತ್ರದಲ್ಲಿ ಪರಿವರ್ತನೆ ತಂದ ಅರಸು ಅವರು ದುರ್ಬಲ ವರ್ಗದವರಲ್ಲಿ ಸ್ವಾಭಿಮಾನದ ಕಲ್ಪನೆ ಹುಟ್ಟಿಸಿ ಅವರಿಗೆ ಆರ್ಥಿಕ ಸ್ವಾವಲಂಬನೆ ಒದಗಿಸಿದ ಯುಗಪುರುಷರಾಗಿದ್ದಾರೆ ಎಂದು ಹೇಳಿದರು.

ಸರಳ, ನೇರ, ನಿರ್ಭೀತ ಆಡಳಿತಕ್ಕೆ ಹೆಸರಾದ ಅರಸು ಅವರು ಜನಸಾಮಾನ್ಯರ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಹಿಂದುಳಿದ ವರ್ಗ, ದಲಿತರ, ಬಡವರ ಮನಸ್ಸಿನಲ್ಲಿ ಅವರು ಚಿರಸ್ಥಾಯಿಯಾಗಿದ್ದಾರೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಕೆ ಐ ಮಕಾನದಾರ ಮಾತನಾಡಿ, ಬಡವರ ಬದುಕಿನಲ್ಲಿ ಹೊಸ ಭರವಸೆ ತಂದ ಅರಸು ಅವರು ಕರ್ನಾಟಕದಲ್ಲಿ ಜನಹಿತ ಯೋಜನೆಗಳನ್ನು ಅನುಷ್ಠಾನಗೊಳಿಸಿದ ಧೀಮಂತ ನಾಯಕ ಎಂದು ಹೇಳಿದರು.




ಶಿಕ್ಷಕರಾದ ಎಸ್ ಎಸ್ ಅರಬ, ಎನ್ ಬಿ ಚೌಧರಿ, ಎಸ್ ಪಿ ಪೂಜಾರಿ, ಅತಿಥಿ ಶಿಕ್ಷಕ ಅಫ್ತಾಬ್ ಮುಲ್ಲಾ ಸೇರಿದಂತೆ ಮಕ್ಕಳು ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR